# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 39 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 23–08–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 39 | Title- Code: KARKAN 28269 | Chitradurga | Date: 23-08-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕುರಿಮರಿಗಳ ಮೇಲೆ ದಾಳಿ ನಡೆಸಿದ ನಾಯಿಗಳ ಹಿಂಡು: ಏಳು ಕುರಿಮರಿ ಸಾವು 2

ಜನಸಂಖ್ಯೆ ಇಲ್ಲದ ಕಡೆ ಪರಿಶಿಷ್ಟರ ಅನುದಾನ ಬಳಕೆ ಮಾಡದಂತೆ ಕಟ್ಟೆಚ್ಚರ 3

ಮಕ್ಕಳಿಗೆ ಒಳ್ಳೆಯ ಸಂಸ್ಕಾರ, ನಡತೆ ಕಲಿಸಬೇಕು ಎಂಬುದು ಬಹುದೊಡ್ಡ ಆಶಯ 4



ಸುದ್ದಿ, ಜಾಹಿರಾತಿಗೆ 9686622252


# ಸಿಎಂ ರಾಜೀನಾಮೆಗೆ ಬಿಜೆಪಿ ಒತ್ತಾಯ

» ಚಿತ್ರದುರ್ಗ

ಮುಡಾ ಹಗರಣದಲ್ಲಿ ಸಿಲುಕಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಭಂಡತನ ಪ್ರದರ್ಶಿಸುವ ಬದಲು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಅದನ್ನು ಬಿಟ್ಟು ರಾಜ್ಯಪಾಲರನ್ನು ಏಕವಚನದಲ್ಲಿ ಮಾತನಾಡುವುದು ಸರಿಯಲ್ಲ ಎಂದು ಬಿಜೆಪಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಟಿ.ಸುರೇಶ್‌ಸಿದ್ದಾಪುರ ತಿಳಿಸಿದ್ದಾರೆ.




ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ವಿರುದ್ದ ಪ್ರಾಸಿಕ್ಯೂಷನ್‌ಗೆ ಅವಕಾಶ ನೀಡಿರುವ ರಾಜ್ಯಪಾಲರ ಬಗ್ಗೆ ಅವಹೇಳನಕಾರಿ ಮಾತುಗಳನ್ನಾಡುತ್ತಿರುವ ಕಾಂಗ್ರೆಸ್ ವಿರುದ್ದ ಬಿಜೆಪಿ.ಯಿಂದ ಒನಕೆ ಓಬವ್ವ ವೃತ್ತದಲ್ಲಿ ಗುರುವಾರ ನಡೆಸಿದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು. ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಅಂದಿನ ರಾಜ್ಯಪಾಲ ಹಂಸರಾಜ್ ಭಾರಧ್ವಾಜ್‌ರವರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದಾಗ ನಾವುಗಳ್ಯಾರು ಪ್ರತಿಭಟನೆ ಮಾಡದೆ ಕಾನೂನನ್ನು ಗೌರವಿಸಿದೆವು. ಈಗಿನ ಕಾಂಗ್ರೆಸ್ ಸರ್ಕಾರದ ಸಚಿವರು ಸಿದ್ದರಾಮಯ್ಯನವರು ಯಾವುದೇ ತಪ್ಪು ಮಾಡಿಲ್ಲ ಎಂದು ಸಮರ್ಥಿಸಿಕೊಳ್ಳುತ್ತಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು?

ಮುಡಾದಲ್ಲಿ ಹಗರಣವಾಗಿರುವುದನ್ನು ಒಪ್ಪಿಕೊಂಡು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರದಿಂದ ಕೆಳಗಿಳಿದು ಕಾನೂನು ರೀತಿಯಲ್ಲಿ ಹೋರಾಟ ಮಾಡಲಿ. ಅದನ್ನು ಬಿಟ್ಟು ರಾಜ್ಯಪಾಲರ ವಿರುದ್ದ ಸಂವಿಧಾನಭಾಹಿರ ವ'ಾತ'ುಗ'ಳ'ನ್ನಾಡ'ುವ'ುದ'ು ಸರಿಯಲ್ಲ. ಐವಾನ್ ಡಿಸೋಜ, ದಿನೇಶ್‌ಗುಂಡೂರಾವ್, ಕೃಷ್ಣಭೈರೇಗೌಡ ಇನ್ನು ಅನೇಕ ನಾಯಕರುಗಳು ಹೀನಾಯ ಪದಗಳನ್ನು ಬಳಸುವುದನ್ನು ನಿಲ್ಲಿಸದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದೆಂದು ಎಚ್ಚರಿಸಿದರು.

ಪ್ರಧಾನ ಕಾರ್ಯದರ್ಶಿ ಸಂಪತ್ ಮಾತನಾಡಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷ ಮೂರು ತಿಂಗಳಷ್ಟರೊಳಗೆ ನಾನಾ ರೀತಿಯ ಹಗರಣಗಳನ್ನು ಎಸಗಿರುವುದನ್ನು ನೋಡಿದರೆ ಆಲಿಬಾಬು ಮತ್ತು ನಲವತ್ತು ಕಳ್ಳರು ಎನ್ನುವಂತಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ದ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅವಕಾಶ ನೀಡಿರುವುದನ್ನು ಸಹಿಸಿಕೊಳ್ಳಲು ಆಗದ ಕಾಂಗ್ರೆಸ್ ನಾಯಕರುಗಳು ರಾಜ್ಯಪಾಲರ ಬಗ್ಗೆ ಅಗೌರವದಮಾತುಗಳನ್ನಾಡುತ್ತಿದ್ದಾರೆ. ದಲಿತ ವಿರೋಧಿ ಕಾಂಗ್ರೆಸ್‌ನಲ್ಲಿ ಒಬ್ಬರಿಗಿಂತ ಒಬ್ಬರು ಹಗರಣಗಳನ್ನು ಎಸಗುವುದರಲ್ಲಿ ನಿಸ್ಸೀಮರು. ಐವಾನ್ ಡಿಸೋಜರನ್ನು ಕೂಡಲೆ ಬಂಧಿಸಬೇಕೆಂದು ಒತ್ತಾಯಿಸಿದರು. ಬಿಜೆಪಿ. ನಗರ ಮಂಡಲ ಅಧ್ಯಕ್ಷ ನವೀನ್ ಚಾಲುಕ್ಯ ಮಾತನಾಡುತ್ತ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ಕಳಂಕ ಬಂದಿರುವುದರಿಂದ ಕೂಡಲೆ ರಾಜೀನಾಮೆ ನೀಡಬೇಕು. ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗಲು ಅಂದಿನ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದಾಗವಿರೋಧಪಕ್ಷದನಾಯಕರಾಗಿದ್ದ ಸಿದ್ದರಾಮಯ್ಯನವರು ರಾಜೀನಾಮೆಗೆ ಒತ್ತಡ ಹೇರಿದ್ದನ್ನು ಮರೆತಂತಿದೆ. ಯಾವುದೇ ಕಪ್ಪುಚುಕ್ಕೆಯಿಲ್ಲದೆ ಆಡಳಿತ ನಡೆಸುತ್ತಿದ್ದೇನೆಂದು ಹೇಳಿಕೊಳ್ಳುತ್ತಿರುವ ಸಿದ್ದರಾಮಯ್ಯನವರು ಮೈತುಂಬ ಕಳಂಕ ಮೆತ್ತಿಕೊಂಡಿರುವುದರಿಂದ ತಕ್ಷಣವೆ ಅಧಿಕಾರದಿಂದ ಕೆಳಗಿಳಿದು ವಿಚಾರಣೆಗೆ ಸಹಕರಿಸಬೇಕೆಂದು ಆಗ್ರಹಿಸಿದರು.

ಬಿಜೆಪಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಕಾಯಿ ರಾಂದಾಸ್, ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಮಲ್ಲಿಕಾರ್ಜುನ್, ಜಿಲ್ಲಾ ರೈತ ಮೋರ್ಚಾ ಅಧ್ಯಕ್ಷ ವೆಂಕಟೇಶ್‌ಯಾದವ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್, ವಕ್ತಾರ ನಾಗರಾಜ್‌ಬೇದ್ರೆ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿ ಚಂದ್ರು, ಭಾರ್ಗವಿ ದ್ರಾವಿಡ್, ನಂದಿ ನಾಗರಾಜ್, ಬಸಮ್ಮ, ವೀರೇಶ್, ಕಿರಣ್, ವೀಣ, ನಗರಸಭೆ ಸದಸ್ಯ ಸುರೇಶ್, ಶಂಭು ಇನ್ನು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಕೊಲ್ಕತ್ತಾದಲ್ಲಿ ವೈದ್ಯೆ ಪ್ರಕರಣ: ಪ್ರತಿಭಟನೆ

» ಚಿತ್ರದುರ್ಗ




ಕೊಲ್ಕತ್ತಾದಲ್ಲಿ ಟ್ರೈನಿ ವೈದ್ಯೆ ಮೇಲೆ ಅತ್ಯಾಚಾರವೆಸಗಿ ಕೊಲೆಗೈದಿರುವ ತಪ್ಪಿತಸ್ಥರಿಗೆಕಠಿಣ ಶಿಕ್ಷೆವಿಧಿಸುವಂತೆ ಇನ್ನರ್‌ವೀಲ್ಹ್ ಕ್ಲಬ್‌ನಿಂದ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಕಚೇರಿಯ ಶಿರಸ್ತೆದಾರ್‌ಗೆ ಮನವಿ ಸಲ್ಲಿಸಲಾಯಿತು.

ಮದಕರಿನಾಯಕಸರ್ಕಲ್‌ನಿಂದ ಮೆರವಣಿಗೆ ಮೂಲಕ ಆಗಮಿಸಿದ ಪ್ರತಿಭಟನಾಕಾರರು ಟ್ರೈನಿ ವೈದ್ಯೆಯ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿ ಹತ್ಯೆಗೈದಿರುವುದು ಇಡಿ ಮನುಕುಲವೆ ನಾಚಿ ತಲೆತಗ್ಗಿಸುವಂತಾಗಿದೆ. ಈ ವಿಚಾರವನ್ನು ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸಿ ಅಮಾನವೀಯ ಕೃತ್ಯವೆಸಗಿರುವವರಿಗೆ ಗಲ್ಲು ಶಿಕ್ಷೆ ವಿಧಿಸುವಂತೆ ಇನ್ನರ್‌ವೀಲ್ಹ್ ಕ್ಲಬ್ ಅಧ್ಯಕ್ಷೆ ಪೂಜಾ ಪ್ರದೀಪ್ ಒತ್ತಾಯಿಸಿದರು.ಇನ್ನರ್‌ವೀಲ್ಹ್ ಕ್ಲಬ್ ಕಾರ್ಯ ದರ್ಶಿ ನಮ್ರತಾ ದೇವರಾಜ್, ವೈಸ್ ಪ್ರೆಸಿಡೆಂಟ್ ವಿಜಯಕಿರಣ್, ಐ.ಪಿ.ಪಿ. ಮೋಕ್ಷರುದ್ರಸ್ವಾಮಿ, ಶ್ಯಾಮಲ ಶಿವಪ್ರಕಾಶ್, ಜ್ಯೋತಿಲಕ್ಷ್ಮಣ್,ಭಾಗ್ಯಮೂರ್ತಿ, ಬಿಜೆಪಿ. ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಶೈಲಜಾರೆಡ್ಡಿ ಹಾಗೂ ಕ್ಲಬ್‌ನ ಎಲ್ಲಾ ಸದಸ್ಯರು, ಚೈತನ್ಯ ಪಿ.ಯು.ಕಾಲೇಜಿನ ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಬೈಕ್ ವೀಲಿಂಗ್ ಮಾಡುತ್ತಿದ್ದವನ ಸೆರೆ

» ಹೊಸದುರ್ಗ



ಪಟ್ಟಣದ ಮುಖ್ಯ ರಸ್ತೆಯಲ್ಲಿ ಬೈಕ್‌ನಲ್ಲಿ ವೀಲಿಂಗ್ ಮಾಡುತ್ತಿದ್ದ ಯುವಕನನ್ನು ಪೊಲೀಸರು ಬಂಧಿಸಿ, ಈತನ ಮೇಲೆ ಕೇಸ್ ದಾಖಲಿಸಿಕೊಂಡಿದ್ದಾರೆ. ಬಂಧಿತ ಯುವಕನನ್ನು ಹೊಸದುರ್ಗ ಪಟ್ಟಣದ ನಿವಾಸಿ ಸಂಜಯ್ ಎಂದು ಹೇಳಲಾಗಿದೆ.

ಹೊಸದುರ್ಗ ಪಟ್ಟಣದ ಮುಖ್ಯ ರಸ್ತೆ, ಕುಂಚಿಟಿಗ ಮಠದ ಸಮೀಪ, ಪುರದ ರಸ್ತೆ, ಬೋಕಿಕೆರೆ ರಸ್ತೆ, ಹಾಲುರಾಮೇಶ್ವರ ರಸ್ತೆ ಹಾಗೂ ಇನ್ನಿತರ ಕಡೆಗಳಲ್ಲಿ ಬೈಕ್ ವೀಲಿಂಗ್ ಮಾಡುವಂತಹ ಪುಂಡರನ್ನು ಪತ್ತೆ ಹಚ್ಚಿ, ಅಂತವರ ವಿರುದ್ಧ ಕೇಸ್ ದಾಖಲಿಸಿ ಕಾನೂನು ಕ್ರಮಕ್ಕೆ ಹೊಸದುರ್ಗ ಪೊಲೀಸರು ಮುಂದಾಗಿದ್ದಾರೆ. ಅದರಂತೆಯೇ, ಬಂಧಿತ ಸಂಜಯ್ ಎಂಬ ಯುವಕ ಪಟ್ಟಣದ ಮುಖ್ಯ ರಸ್ತೆಯಲ್ಲಿ ವಿಲ್ಹಿಂಗ್ ಮಾಡುವ ಮೂಲಕ ಸಾರ್ವಜನಿಕರಿಗೆ ತುಂಬಾ ಕಿರಿಕಿರಿ ಉಂಟು ಮಾಡುತ್ತಿದ್ದ.


ಪುಟ ↘ 2


ಪ್ರಮುಖ ಸುದ್ದಿ

# ಕರಡಿದಾಳಿಗೆ ತುತ್ತಾಗಿ ಮೃತಪಟ್ಟ ಓಂಕಾರಪ್ಪನ ಕುಟುಂಬಕ್ಕೆ ಪರಿಹಾರದ ಚೆಕ್ ವಿತರಿಸಿದ ಶಾಸಕ ಎನ್.ವೈ.ಗೋಪಾಲಕೃಷ್ಣ

» ಚಳ್ಳಕೆರೆ



ತಾಲ್ಲೂಕಿನ ತಳಕು ಹೋಬಳಿ ಸಿರಿವಾಳ ಓಬಳಾಪುರ ಗ್ರಾಮದಲ್ಲಿ ಎಮ್ಮೆ ಮೇಯಿಸುವ ಸಂದರ್ಭದಲ್ಲಿ ಕರಡಿದಾಳಿಗೆ ತುತ್ತಾಗಿ ಗಾಯಗೊಂಡು ಮೃತಪಟ್ಟ ಓಂಕಾರಪ್ಪ(65)ನಕುಟುಂಬವರ್ಗಕ್ಕೆಅರಣ್ಯ ಇಲಾಖೆಯಿಂದ ತುರ್ತು ಪರಿಹಾರವಾಗಿ ನೀಡಿದ 5 ಲಕ್ಷದ ಚೆಕನ್ನು ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ ನಗರದ ಪ್ರವಾಸಿಮಂದಿರದಲ್ಲಿ ಮೃತನ ಪತ್ನಿ ಅನಸೂಯಮ್ಮನವರಿಗೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಕಾಡುಪ್ರಾಣಿಗಳು ನಾಡಿನೊಳಗೆ ಪ್ರವೇಶಿಸಿ ಸಾರ್ವಜನಿಕರಿಗೆ ಭಯವನ್ನುಂಟು ಮಾಡುತ್ತಿವೆ. ಕಾರಣ, ಅರಣ್ಯ ಸಂಪತ್ತು ನಾಶವಾಗುತ್ತಿರುವ ಸಂದರ್ಭದಲ್ಲಿ ಕಾಡಿನಲ್ಲಿ ಆಹಾರ, ನೀರು, ಜಾಗದ ಕೊರತೆಯಿಂದ ನಗರ ಪ್ರವೇಶಿಸುತ್ತಿವೆ. ನಾವೆಲ್ಲರೂ ಎಚ್ಚರಿಕೆಯಿಂದ ಇರಬೇಕಿದೆ ರೈತ ಓಂಕಾರಪ್ಪನ ಸಾವು ನೋವು ತಂದಿದೆ, ಅರಣ್ಯ ಇಲಾಖೆಯಿಂದ ಮೊದಲನೇ ಹಂತದ 5 ಲಕ್ಷ ಚೆಕನ್ನು ನೀಡಲಾಗಿದೆ. ಇನ್ನೂ 10 ಲಕ್ಷ ಪರಿಹಾರದ ಹಣ ಅವರ ಕುಟುಂಬ ವರ್ಗದ ಖಾತೆಗೆ ನೇರವಾಗಿ ಜಮಾವಾಗಲಿದೆ ಎಂದರು.

ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಕಾಡುಗಳ ಸನ್ನಿಹದ ಗ್ರಾಮಾಂತರ ಪ್ರದೇಶಗಳಿಗೆ ಪ್ರತಿನಿತ್ಯ ಭೇಟಿ ನೀಡಿ ಜಾಗೃತಿ ಮೂಡಿಸಿ, ಕರಡಿ, ಚಿರತೆಗಳು ಸಾಕಷ್ಟು ಸಂಖ್ಯೆಯಲ್ಲಿ ತಾಲ್ಲೂಕಿನ ಗಡಿಭಾಗದ ಕಾಡುಗಳಲ್ಲಿದ್ದು, ಸಂಜೆ ವೇಳೆ ಆಹಾರ ಹುಡುಕುತ್ತಾ ಗ್ರಾಮವನ್ನು ಪ್ರವೇಶಿಸುತ್ತಿವೆ. ಆದ್ದರಿಂದ ಅರಣ್ಯ, ಪೊಲೀಸ್‌ಇಲಾಖೆ ಅಧಿಕಾರಿಗಳು ಗ್ರಾಮಗಳಲ್ಲಿ ಡಂಗೂರ ಸಾರಿಸುವ ಮೂಲಕ ಜನರನ್ನು ಎಚ್ಚರಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಚಿರತೆದಾಳಿಗೆ ತುತ್ತಾಗಿ ಗಾಯಗೊಂಡ ಬೊಮ್ಮಲಿಂಗನಹಳ್ಳಿಯ ಬಸವರಾಜವರಿಗೆ 1.60 ಲಕ್ಷ, ಗುಂತಕೋಲಮ್ಮನಹಳ್ಳಿಯ ಸಾನ್ವಿ ಎಂಬ ಮಗುವಿಗೆ ಕೋತಿದಾಳಿ ಮಾಡಿ ಗಾಯಗೊಳಿಸಿದ್ದು, ಅವರಿಗೆ 60 ಸಾವಿರ ಪರಿಹಾರದ ಹಣದ ಚೆಕನ್ನು ಶಾಸಕರು ವಿತರಿಸಿದರು.

ಡಿಎಫ್‌ಒ ರಾಜಣ್ಣ ಮಾತನಾಡಿ, ಅರಣ್ಯ ಪ್ರದೇಶದಲ್ಲಿದ್ದ ಕಾಡುಪ್ರಾಣಿಗಳು ನಾಡುವ ಪ್ರವೇಶಿಸುವುದು ಸ್ವಾಬಾವಿಕವಾಗಿದೆ. ಈ ಬಗ್ಗೆ ಇಲಾಖೆ ಅಧಿಕಾರಿಗಳು ಈಗಾಗಲೇ ಗ್ರಾಮೀಣಭಾಗಗಳಲ್ಲಿಜಾಗೃತಿಮೂಡಿಸುವ ಕಾರ್ಯವನ್ನು ಮುನ್ನಡೆಸಿದ್ದಾರೆ. ಸಾರ್ವಜನಿಕರು ಸಂಜೆ ವೇಳೆಯಲ್ಲಿ ಮನೆಯಿಂದ ಗ್ರಾಮದ ಹೊರಭಾಗಕ್ಕೆ ಹೋಗುವ ಮುನ್ನ ಎಚ್ಚರಿಕೆ ವಹಿಸಬೇಕು ಎಂದರು. ಅರಣ್ಯ ಸಂರಕ್ಷಣಾಧಿಕಾರಿ ಎಸ್.ವಿ.ಮಂಜುನಾಥ, ವಸಂತಕುಮಾರ್, ರಾಜೇಶ್, ಗುರುಲಿಂಗಣ್ಣ, ಕಾಂಗ್ರೆಸ್ ಮುಖಂಡರಾದ ಸೂರನಾಯಕ, ನಾಗೇಶ್‌ರೆಡ್ಡಿ, ಪಿಎಸ್‌ಐ ಲೋಕೇಶ್ ಮುಂತಾದವರು ಉಪಸ್ಥಿತರಿದ್ದರು.

## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ

» ಚಿತ್ರದುರ್ಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2024–25ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಹ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಭಾರತ ಸರ್ಕಾರದಿಂದ ಮಾನ್ಯತೆ ಪಡೆದ ಅಧಿಕೃತ ರಾಷ್ಟ್ರೀಯ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ಪಡೆದ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಿಗೆ ನಿಯೋಜಿಸಲ್ಪಟ್ಟ ತಂಡದಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದ ರಾಜ್ಯದ ಕ್ರೀಡಾಪಟುಗಳು ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಬಹುದು. ಕಚೇರಿಯಿಂದ ಅರ್ಜಿಯನ್ನು ಪಡೆದು ಭರ್ತಿಮಾಡಿ ಅಗತ್ಯ ದಾಖಲೆಗಳೊಂದಿಗೆ ಸೆಪ್ಟೆಂಬರ್ 25ರೊಳಗೆ ಸಲ್ಲಿಸುವಂತೆ ಸಹಾಯಕ ನಿರ್ದೇಶಕಿ ಎಸ್.ಎಂ.ನೆಲವಿಗಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 08194–235635 ಸಂಪರ್ಕಿಸಬಹುದು.

### ಅಂಜನಾ ನೃತ್ಯ ಕಲಾ ಕೇಂದ್ರದಿಂದ ನಾಟ್ಯ ನೈದಿಲೆ ನೃತ್ಯೋತ್ಸವ




» ಚಿತ್ರದುರ್ಗ

ಅಂಜನಾ ನೃತ್ಯ ಕಲಾ ಕೇಂದ್ರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ವತಿಯಿಂದ ನಾಟ್ಯ ನೈದಿಲೆ ನೃತ್ಯೋತ್ಸವ–2024 ಆ.24 ರಂದು ಸಂಜೆ ಐದು ಗಂಟೆಗೆ ತ.ರಾ.ಸು. ರಂಗಮಂದಿರದಲ್ಲಿ ನಡೆಯಲಿದೆ. ನೃತ್ಯ ಕಲಾವಿದರು ಹಾಗೂ ಶಿಕ್ಷಕರಾದ ಬೆಂಗಳೂರಿನ ವಿದ್ವಾನ್ ಅನಿಲ್‌ಕುಮಾರ್, ನಾಟ್ಯ ಭಾರತಿ ಟ್ರಸ್ಟ್ ಬೆಂಗಳೂರಿನ ವಿದುಷಿ ಡಾ. ಶ್ರೀರಂಜಿತಾ ನಾಗೇಶ್, ವಿದ್ವಾನ್ ಜಿ.ಎಸ್.ನಾಗೇಶ್ ಇವರುಗಳು ನಟರಾಜ ದೀಪ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಬಾಲಕರ ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಡಾ. ಹೇಮಂತರಾಜು ಎಸ್.ಎನ್. ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವರು. 25 ರಂದು ಸಂಜೆ ಐದಕ್ಕೆ ನಟರಾಜ ಪೂಜೆ ನೃತ್ಯ ಮಾಲಿಕಾ ಕು.ಶಿವಾನಿ ಕೆ.ಆರ್. ಮತ್ತು ಸಂಗಡಿಗರು ಹಾಗೂ ಕಲಾಕೇಂದ್ರದ ವಿದ್ಯಾರ್ಥಿಗಳಿಂದ. ಸಂಜೆ ಆರಕ್ಕೆ ನಡೆಯುವ ಸಭಾ ಕಲಾಪದ ಸಾನಿಧ್ಯವನ್ನು ಕಬೀರಾನಂದಾಶ್ರಮದ ಶಿವಲಿಂಗಾನಂದಸ್ವಾಮಿ ವಹಿಸಲಿದ್ದಾರೆ. ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಅಶೋಕ್ ಎನ್.ಚಲವಾದಿ, ನಿರ್ದೇಶಕ ರವಿಚಂದ್ರ, ಸಂಗೀತ ಮತ್ತು ನೃತ್ಯ ಅಕಾಡೆಮಿ ಅಧ್ಯಕ್ಷರಾದ ವಿದುಶಿ ಶುಭಾ ಧನಂಜಯ್, ಬ್ರಾಹ್ಮಣ ಸಂಘದ ಅಧ್ಯಕ್ಷ ಪಿ.ಎಸ್.ಮಂಜುನಾಥ್ ಇವರುಗಳು ಪಾಲ್ಗೊಳ್ಳಲಿದ್ದಾರೆ. ಖ್ಯಾತ ಹಿನ್ನೆಲೆ ಗಾಯಕಿ ಶ್ರೀಮತಿ ಜ್ಯೋತಿ ರವಿಪ್ರಕಾಶ್ ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು. ಅಂಜನಾ ನೃತ್ಯ ಕಲಾ ಕೇಂದ್ರದ ಹಿರಿಯ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗು ಪ್ರಮಾಣ ಪತ್ರ ವಿತರಣೆ. ಅಂಜನಾ ಕಲಾನಿಧಿ ಪ್ರಶಸ್ತಿ ಪ್ರದಾನ. ಶ್ರೀಮತಿ ಜ್ಯೋತಿ ರವಿಪ್ರಕಾಶ್‌ರವರಿಂದ ಗೀತ ಕುಸುಮ. ಚಿತ್ರದುರ್ಗದ ಗತ ಇತಿಹಾಸ ಸಾರುವ ಅಕ್ಕ–ತಂಗಿ ಬರಗೇರಮ್ಮ, ತಿಪ್ಪನಘಟ್ಟಮ್ಮನವರ ಭೇಟಿ ಉತ್ಸವ ಪ್ರದರ್ಶಿಸಲಾಗುವುದು ಎಂದು ಪ್ರಾಚಾರ್ಯರಾದ ವಿದ್ವಾನ್ ಸಿ.ಆರ್.ಶಿವಪ್ರಕಾಶ್ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಬೈಕ್ ವೀಲಿಂಗ್ ಮಾಡುತ್ತಿದ್ದವನ ಸೆರೆ

» ಮೊದಲ ಪುಟದಿಂದ

ವಿಲ್ಹಿಂಗ್ ಮಾಡುತ್ತಿರುವ ಸಂದರ್ಭದಲ್ಲಿ ಪೊಲೀಸರಿಗೆ ರೆಡ್ ಹ್ಯಾಂಡಾಗಿ ಸಿಕ್ಕಿಬಿದ್ದಿದ್ದಾನೆ. ತಕ್ಷಣವೇ ಈತನನ್ನು ಪೊಲೀಸ್ ಠಾಣೆಗೆ ಕರೆತಂದು ವಿಚಾರಣೆ ನಡೆಸಿ, ಕೇಸ್ ದಾಖಲಿಸಿಕೊಂಡಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿ ಪೊಲೀಸ್ ಇನ್ಸ್‌ಪೆಕ್ಟರ್ ಎನ್. ತಿಮ್ಮಣ್ಣ ಮಾತನಾಡಿ, ಕೆಲ ಯುವಕರು ಬೈಕ್ ವೀಲಿಂಗ್ ಮಾಡುವ ಮೂಲಕ ಪುಂಡಾಟ ಆಡುತ್ತಿರುವುದು ಗಮನಕ್ಕೆ ಬಂದಿದೆ. ವೀಲಿಂಗ್ ಮಾಡಲು ಹೋಗಿ ಬಹಳಷ್ಟು ಯುವಕರು ತಮ್ಮ ಜೀವ ಕಳೆದುಕೊಂಡಿರುವ ಪ್ರಕರಣಗಳು ರಾಜ್ಯದಲ್ಲಿ ಬಹಳಷ್ಟು ನಡೆದಿವೆ. ಪೋಷಕರು ಮಕ್ಕಳ ಬಗ್ಗೆ ಗಮನಹರಿಸಬೇಕು. ಇಂತಹ ವರ್ತನೆಗಳು ಕಂಡುಬಂದಲ್ಲಿ, ಅವರನ್ನು ಹತೋಟಿಯಲ್ಲಿ ಇಡಬೇಕು. ವಿಲ್ಹಿಂಗ್ ಮಾಡುವಂತವರು ಎಲ್ಲಿಯಾದರೂ ಕಂಡುಬಂದರೆ, ಅಂಥವರ ವಿರುದ್ಧ ಕೇಸ್ ದಾಖಲಿಸಿ, ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

### ಪ್ರತಿಭಾ ಪುರಸ್ಕಾರ

» ಚಿತ್ರದುರ್ಗ

ಕುಂಚಿಗ ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಆ.24 ರಂದು ಬೆಳಿಗ್ಗೆ 10-45 ಕ್ಕೆ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. 2023-24 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ಕುಂಚಿಗ ವೀರಶೈವ ಲಿಂಗಾಯತ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಡಾ.ಎಂ.ಯೋಗೇಂದ್ರ, ಡಾ.ಅರವಿಂದ ಪಾಟೀಲ್ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಗುವುದು. ಮಾಜಿ ಶಾಸಕ, ಕುಂಚಿಗ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಎಂ.ಬಿ.ತಿಪ್ಪೇರುದ್ರಪ್ಪ ಅಧ್ಯಕ್ಷತೆ ವಹಿಸುವರು. ಗೌರವಾಧ್ಯಕ್ಷ ಹಾಗೂ ನಿವೃತ್ತ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಎಸ್.ಪರಮೇಶ್ವರಪ್ಪ, ಮಾಜಿ ಶಾಸಕರುಗಳಾದ ಟಿ.ಹೆಚ್.ಬಸವರಾಜ್, ಪಿ.ರಮೇಶ್, ನಿವೃತ್ತ ಪ್ರಾಚಾರ್ಯರಾದ ಬಿ.ಸಿ.ಕಾಂತರಾಜ್ ಇವರುಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕುಂಚಿಗ ವೀರಶೈವ ಲಿಂಗಾಯತ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕುಂಚಿಗ ವೀರಶೈವ ಲಿಂಗಾಯತ ಸಮಾಜದ ಕಾರ್ಯದರ್ಶಿ ಹೆಚ್.ಕುಬೇರಪ್ಪ ದಗ್ಗೆ ಮನವಿ ಮಾಡಿದ್ದಾರೆ.

### ಏಕಲವ್ಯ ಪ್ರಶಸ್ತಿಗೆ ಅರ್ಜಿ

» ಚಿತ್ರದುರ್ಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಏಕಲವ್ಯ ಹಾಗೂ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಕ್ರೀಡಾಪಟುಗಳು ಏಕಲವ್ಯ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಕ್ರೀಡಾ ಕ್ಷೇತ್ರದಲ್ಲಿ ತೊಡಗಿಸಿಕೊಂಡು ಕ್ರೀಡೆಯ ಅಭಿವೃದ್ಧಿಗೆ ನೆರವು ನೀಡಿ ರಾಜ್ಯ, ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಕ್ರೀಡಾ ಕ್ಷೇತ್ರದಲ್ಲಿ ಕೊಡುಗೆ ನೀಡಿದವರು ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಸಲ್ಲಿಸಬಹುದು. ಏಕಲವ್ಯ ಪ್ರಶಸ್ತಿಗೆ ಆಗಸ್ಟ್ 25 ಹಾಗೂ ಕ್ರೀಡಾ ಪೋಷಕ ಪ್ರಶಸ್ತಿಗೆ ಸೆಪ್ಟೆಂಬರ್ 10 ಕಡೆಯ ದಿನವಾಗಿದೆ. ಕಚೇರಿಯಿಂದ ಅರ್ಜಿಯನ್ನು ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿ ಸಲ್ಲಿಸುವಂತೆ ಸಹಾಯಕ ನಿರ್ದೇಶಕಿ ಎಸ್.ಎಂ.ನೆಲವಿಗಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 08194-235635 ಸಂಪರ್ಕಿಸಬಹುದು.

### ಉದ್ಯೋಗ ಮೇಳ

» ಚಳ್ಳಕೆರೆ

ನಗರದ ವಾಸವಿ ಪದವಿ ಕಾಲೇಜು ಕಾಲೇಜು ಆವರಣದಲ್ಲಿ ಆ.24 ಮತ್ತು 29 ರಂದು ಬೆಳಗ್ಗೆ 10.30ಕ್ಕೆ ಉದ್ಯೋಗ ಮೇಳವನ್ನು ಹಮ್ಮಿಕೊಂಡಿರುವುದಾಗಿ ಪ್ರಾಂಶುಪಾಲ ಜೆ.ಶ್ರೀರಾಮುಲು ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಕಾಲೇಜಿನ ಆವರಣದಲ್ಲಿ ಅಂದು ಬೆಳಗ್ಗೆಯಿಂದ ಸಂಜೆವರೆಗೂ ಉದ್ಯೋಗ ಮೇಳ ಹಮ್ಮಿಕೊಂಡಿದೆ. ಪ್ರಸ್ತುತ ನಮ್ಮ ಕಾಲೇಜಿನ ಅಂತಿಮ ವಾಣಿಜ್ಯ ಹಾಗೂ ಕಳೆದ ಮೂರು ವರ್ಷಗಳ ಹಿಂದೆ ಪದವಿ ಮುಗಿಸಿದವರು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಎನ್‌ಐಐಟಿ ಕಂಪನಿಯೂ ಸೇರಿದಂತೆ ಹಲವಾರು ಕಂಪನಿ ಮತ್ತು ಆ.29ರ ಗುರುವಾರ ಆಲ್‌ಸೀ ಟೆಕ್ನಾಲಜಿಸ್ ಬೆಂಗಳೂರು ಇವರು ಮೇಳದಲ್ಲಿ ಭಾಗವಹಿಸಲಿವೆ. ಹೆಚ್ಚಿನ ಮಾಹಿತಿಗೆ ಕಾಲೇಜಿನ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗವನ್ನು ಸಂಪರ್ಕಿಸಲು ಮನವಿ ಮಾಡಿದೆ.

### ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ನೀಡಲು ಕ್ರೀಡಾ ಪೋಷಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ಕಚೇರಿಯಿಂದ ಪಡೆದು ಅಗತ್ಯ ದಾಖಲೆಗಳೊಂದಿಗೆ ಸೆಪ್ಟೆಂಬರ್ 10 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ, ಸ್ಟೇಡಿಯಂ, ದಾವಣಗೆರೆ ಇಲ್ಲಿಗೆ ಸಲ್ಲಿಸಲು ಜಯಲಕ್ಷ್ಮಿಬಾಯಿ ತಿಳಿಸಿದ್ದಾರೆ.

**ಅಂತರಾಷ್ಟ್ರೀಯ ಯುವ ದಿನಾಚರಣೆ ಮತ್ತು ಯುವ ಜನರಿಗೆ ಕಾನೂನು ಅರಿವು ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ.ವಿಜಯ್**

# ದೇಶದ ಅಭಿವೃದ್ಧಿಗೆ ಯುವ ಜನತೆ ಪಾತ್ರ ಮುಖ್ಯ

» ಚಿತ್ರದುರ್ಗ





ಯುವ ಜನತೆಯಲ್ಲಿ ಉತ್ಸಾಹ, ಛಲ ಇರಬೇಕು. ಕುಟುಂಬ, ಸಮಾಜ, ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ಮನೋಭಾವ ಇರಬೇಕು. ರಾಷ್ಟ್ರದ ಸರ್ವಾಂಗೀಣ ಪ್ರಗತಿ ಹಾಗೂ ದೇಶದ ಅಭಿವೃದ್ಧಿಗೆ ಯುವ ಜನತೆ ಶ್ರಮಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಹೇಳಿದರು.

ನಗರದ ಅಮೃತ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನಲ್ಲಿ ಗುರುವಾರ ನೆಹರು ಯುವ ಕೇಂದ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ, ಅಮೃತ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಶ್ರೀ ನೀಲಕಂಠಯ್ಯ ಮೆಮೊರಿಯಲ್ ಪದವಿ ಪೂರ್ವ ಕಾಲೇಜು ವತಿಯಿಂದ ಹಮ್ಮಿಕೊಂಡಿದ್ದ "ಅಂತರಾಷ್ಟ್ರೀಯ ಯುವ ದಿನಾಚರಣೆ ಮತ್ತು ಯುವ ಜನರಿಗೆ ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಯುವಜನತೆ ತಮ್ಮ ಜವಾಬ್ದಾರಿ ಅರಿತು ಜೀವನದಲ್ಲಿ ಗುರಿ ತಲುಪುವ ಕಡೆ ದೃಷ್ಟಿಕೋನ ಹೊಂದಿರಬೇಕು. ಆದರೆ ಇಂದಿನ ಯುವ ಜನತೆ ಇದರಿಂದ ವಿಮುಖರಾಗುತ್ತಿದ್ದಾರೆ.

ತಪ್ಪುಗಳನ್ನು ಮಾಡಿ ಕಾನೂನಿನ ಸಂಘರ್ಷಕ್ಕೆ ತುತ್ತಾಗುತ್ತಿದ್ದಾರೆ ಎಂದು ತಿಳಿಸಿದ ಅವರು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ (ಪೋಕ್ಸೋ), ಬಾಲ್ಯವಿವಾಹ ನಿಷೇಧ ಕಾಯ್ದೆ, ಸೈಬರ್ ಕ್ರೈಂ, ಮಾದಕ ವ್ಯಸನಗಳ ದುಷ್ಪರಿಣಾಮಗಳ ಕುರಿತಂತೆ ಯುವ ಜನತೆಗೆ ಅರಿವು ಮೂಡಿಸುವುದು ಅತ್ಯಗತ್ಯವಾಗಿದೆ ಎಂದರು.

ಪ್ರಸ್ತುತ ಮಾಹಿತಿ ತಂತ್ರಜ್ಞಾನದ ಯುಗದಲ್ಲಿ ನಾವಿದ್ದು, ಡಿಜಿಟಲ್ ಉಪಕರಣಗಳ ಬಳಕೆ ಮಾಡುವ ಮುನ್ನ ಅವುಗಳ ಬಗ್ಗೆ ನಮಗೆ ಹೆಚ್ಚಿನ ಜ್ಞಾನ ಇರಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ನೆಹರು ಯುವಕೇಂದ್ರದ ಜಿಲ್ಲಾ ಯುವಜನ ಅಧಿಕಾರಿ ಎನ್.ಸುಹಾಸ್ ಮಾತನಾಡಿ, ಯಾವುದೇ ದೇಶ ಅಭಿವೃದ್ಧಿಯಾಗಬೇಕಾದರೆ ಅಲ್ಲಿರುವ ನೈಸರ್ಗಿಕ ಸಂಪತ್ತಿನ ಜೊತೆಗೆ ಯುವ ಜನರ ಸಂಪತ್ತು ಬಹಳ ಮುಖ್ಯ ಪಾತ್ರ ವಹಿಸಲಿದೆ. ಯುಜ ಜನರಲ್ಲಿ ಅಗಾಧವಾದ ಶಕ್ತಿ ಇದ್ದು, ಇಂದಿನ ಯುವಕರೇ ಮುಂದಿನ ನಾಯಕರಾಗಿದ್ದು, ಅಭಿವೃದ್ಧಿಯ ಹರಿಕಾರರು ಎಂದೂ ಕರೆಯಲಾಗುತ್ತದೆ ಎಂದರು.

ಯುವ ಜನತೆಯ ಸಮಸ್ಯೆಗೆ ಪರಿಹಾರ, ಯೋಜನೆ ರೂಪಿಸುವುದು ಸೇರಿದಂತೆ ಯುವ ಜನರ ಸಾಧನೆಯನ್ನು ಸಹ ಮೆಚ್ಚುಗೆ ವ್ಯಕ್ತಪಡಿಸಲು ವಿಶ್ವ ಯುವ ದಿನಾಚರಣೆ ಆಚರಿಸಲಾಗುತ್ತದೆ. ಯುವ ದಿನಾಚರಣೆ ಜೊತೆಗೆ ಯುವ ಜನರಿಗೆ ಕಾನೂನು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಕಾನೂನಿನ ಅರಿವು ಬಹಳ ಮುಖ್ಯ ಪಾತ್ರವಹಿಸಲಿದೆ. ಕಾನೂನು ಅರಿವು ಹೆಚ್ಚಾದಂತೆ ಅಪರಾಧಗಳ ಸಂಖ್ಯೆಯೂ ಸಹ ಕಡಿಮೆಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಆರ್.ಗಂಗಾಧರ್ ಮಾತನಾಡಿದರು.

ಕಾರ್ಯಕ್ರಮದಲ್ಲಿ ದೇವರಾಜು ಅರಸು ವಿದ್ಯಾಸಂಸ್ಥೆಯ ಕಾರ್ಯದರ್ಶಿ ಭರತ್, ಅಮೃತ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲ ಮೊಹಮ್ಮದ್ ವಜಾಹತ್ ಉಲ್ಲಾ, ಶ್ರೀ ನೀಲಕಂಠಯ್ಯ ಮೆಮೊರಿಯಲ್ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಟಿ.ದುರುಗಪ್ಪ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಚಿತ್ರದುರ್ಗ ಜಿಲ್ಲಾ ಶಾಖೆಯ ಉಪಸಭಾಪತಿ ಈ.ಅರುಣ್ ಕುಮಾರ್, ಕಾರ್ಯದರ್ಶಿ ಎನ್. ಮಜಹರ್ ಉಲ್ಲಾ ಇದ್ದರು.

# ಯಶಸ್ಸು ನಿಮ್ಮ ಕೈಯಲ್ಲಿದೆ: ಡಾ.ವೆಂಕಟೇಶ್ ಬಾಬು

**ಎಸ್.ಬಿ.ಸಿ. ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಥಮ ಪದವಿ ವಿದ್ಯಾರ್ಥಿಗಳ ಓರಿಯೆಂಟೇಶನ್ ಕಾರ್ಯಕ್ರಮ**

» ದಾವಣಗೆರೆ



ಎಸ್. ಬಿ. ಸಿ. ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಥಮ ಪದವಿ ವಿದ್ಯಾರ್ಥಿಗಳ ಓರಿಯೆಂಟೇಶನ್ ಕಾರ್ಯಕ್ರಮವು ವಿಜೃಂಭಣೆಯಿಂದ ನಡೆಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಡಾ. ವೆಂಕಟೇಶ್ ಬಾಬು ಅವರು ಭಾಗವಹಿಸಿ, "ಯಶಸ್ಸು ನಿಮ್ಮ ಕೈಯಲ್ಲಿದೆ" ಎಂಬ ವಿಷಯದ ಬಗ್ಗೆ ಸ್ಫೂರ್ತಿದಾಯಕ ಮತ್ತು ಪ್ರೇರಣಾದಾಯಕ ಭಾಷಣ ಮಾಡಿದರು.

ಡಾ. ವೆಂಕಟೇಶ್ ಬಾಬು ಅವರು ತಮ್ಮ ಉಜ್ವಲವಾದ ಭಾಷಣದಲ್ಲಿ, ಯಶಸ್ಸು ಸಾಧಿಸಲು ಅಗತ್ಯವಾದ ಸ್ಪಷ್ಟವಾದ ಗುರಿ ಕಠಿಣ ಪರಿಶ್ರಮ, ದೃಢನಿಷ್ಠೆ ಆತ್ಮವಿಶ್ವಾಸ ಮತ್ತು ಸಮಯದ ಪ್ರಾಮುಖ್ಯತೆಯನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು. "ನೀವು ಕಾಲೇಜು ಜೀವನಕ್ಕೆ ಹೆಜ್ಜೆ ಇಡುತ್ತಿದ್ದಂತೆ ನಿಮ್ಮ ಮುಂದೆ ಸುಧಾರಣೆ ತರುವ ಪರಿವರ್ತನೆಗಳು ಸಂಭವಿಸುತ್ತವೆ. ಪ್ರತಿಯೊಬ್ಬ ವಿದ್ಯಾರ್ಥಿಯಲ್ಲಿಯೂ ಯಶಸ್ಸು ಸಾಧಿಸಲು ಅಗತ್ಯವಾದ ಸಾಮರ್ಥ್ಯವಿದೆ. ನೀವು ಪ್ರತಿಯೊಂದು ಸವಾಲುಗಳನ್ನು ನಿರ್ವಹಿಸಲು ತಯಾರಾಗಬೇಕು," ಎಂದು ಅವರು ಹೇಳಿದರು.

ಅವರು ವಿದ್ಯಾರ್ಥಿಗಳಿಗೆ ಜೀವನದಲ್ಲಿ ಉದ್ದೇಶವನ್ನು ಹೊಂದಿ ಕೆಲಸ ಮಾಡಲು ಮತ್ತು ಪ್ರತಿಯೊಂದು ಅವಕಾಶವನ್ನು ಸರಿಯಾಗಿ ಉಪಯೋಗಿಸಿಕೊಳ್ಳಲು ಹುರಿದುಂಬಿಸಿದರು.

"ಯಾವುದೇ ಕಾರ್ಯದಲ್ಲಿ ಯಶಸ್ಸನ್ನು ಪಡೆದುಕೊಳ್ಳಲು, ಉದ್ದೇಶ ಸ್ಪಷ್ಟವಾಗಬೇಕು. ಜ್ಞಾನವನ್ನು ಬುದ್ಧಿವಂತಿಕೆಯಿಂದ ಬಳಸಿ, ಪ್ರತಿದಿನವೂ ನಿಮ್ಮ ಗುರಿಯತ್ತ ಕಠಿಣ ಪರಿಶ್ರಮ ಮಾಡಬೇಕು. ಪಾಸಿಟಿವ್ ಚಿಂತನೆಗಳಿಗೆ ಅಂಟಿಕೊಳ್ಳಿ, ನಿಮ್ಮ ಕನಸುಗಳನ್ನು ಪೂರ್ಣಗೊಳಿಸಲು ಧೈರ್ಯದಿಂದ ಕೆಲಸ ಮಾಡಿ," ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರಾಂಶುಪಾಲರಾದ ಷಣ್ಮುಖ ಕೆ. ರವರು ಅಧ್ಯಕ್ಷತೆಯನ್ನು ವಹಿಸಿ, ವಿದ್ಯಾರ್ಥಿಗಳಿಗೆ ಸುಸಂಗತವಾದ ಶಿಕ್ಷಣ ಹಾಗೂ ಶಿಸ್ತುಬದ್ಧ ಜೀವನದ ಮಹತ್ವವನ್ನು ವಿವರಿಸಿದರು.

ಇದೇ ಸಂದರ್ಭದಲ್ಲಿ, ಕಾಲೇಜಿನ ವಿವಿಧ ವಿಭಾಗಗಳಮುಖ್ಯಸ್ಥರು,ವಿದ್ಯಾರ್ಥಿಗಳು,ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಅಂತಿಮವಾಗಿ, ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಉತ್ತೇಜನ ನೀಡುವ ಉದ್ದೇಶವನ್ನು ಸಾಧಿಸಿತು, ಮತ್ತು ಎಲ್ಲರಿಗೂ ಸ್ಫೂರ್ತಿದಾಯಕವಾಗಿ ಪರಿಣಮಿಸಿತು.

## ರಾಯರ ಅನುಗ್ರಹ ಸಂಪಾದಿಸಲು ಭಕ್ತಿ, ಶ್ರದ್ಧೆಯಿಂದ ಮಾತ್ರ ಸಾಧ್ಯ



» ಚಳ್ಳಕೆರೆ

ಪರಿಶುದ್ಧವಾದ ಭಕ್ತಿ,ಶ್ರದ್ಧೆಯಿಂದ ರಾಯರನ್ನು ಪೂಜಿಸಿದರೆ ಮಾತ್ರ ಅವರ ಅನುಗ್ರಹಕ್ಕೆ ಪಾತ್ರರಾಗಿ ನಮ್ಮ ಸಂಕಷ್ಟಗಳನ್ನು ಪರಿಹರಿಸಿಕೊಳ್ಳಬಹುದು. ಯಾರೂ ಪ್ರತಿನಿತ್ಯ ದೇವರು ಮತ್ತು ಗುರುಗಳನ್ನು ಗೌರವಿಸಿ ಪೂಜಿಸುತ್ತಾರೋ ಅವರು ಸಾರ್ಥಕತೆ ಬದುಕನ್ನು ಕಂಡುಕೊಳ್ಳುವರು. ರಾಯರ ಆರಾಧನೆಯ ಮೂಲ ಉದ್ದೇಶವೇ ನಮ್ಮೆಲ್ಲರ ಸಂಕಷ್ಟಗಳಿಗೆ ಪರಿಹಾರವನ್ನು ಕಂಡುಕೊಳ್ಳುವುದಾಗಿದೆ ಎಂದು ಧಾರ್ಮಿಕ ಚಿಂತಕ ಡಾ.ಅನಂತರಾಮ್ ಗೌತಮ್ ತಿಳಿಸಿದರು. ಅವರು, ವಾಲ್ಮೀಕಿ ನಗರದ ನಂಜನಗೂಡು ಶ್ರೀರಾಘವೇಂದ್ರಸ್ವಾಮಿಗಳ ಮಠದಲ್ಲಿ ಭಕ್ತರು ಆಯೋಜಿಸಿದ್ದ 353ನೇ ಆರಾಧನಾ ಮಹೋತ್ಸವದ ಉತ್ತರಾರಾಧನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು. ಪ್ರತಿವರ್ಷವೂ ನಾವೆಲ್ಲರೂ ಶ್ರೀರಾಯರ ಅನುಗ್ರಹವನ್ನು ಪಡೆಯಲು ಆರಾಧನಾ ಮಹೋತ್ಸವವನ್ನು ಆಚರಣೆ ಮಾಡುತ್ತಾ ಬಂದಿದ್ದೇವೆ. ನಂಬಿದ ಸದ್ಭಕ್ತರಿಗೆ ಯಾವ ಸಂದರ್ಭದಲ್ಲಾದರೂ ಒಳಿತನ್ನು ಮಾಡುವಂತಹ ದಿವ್ಯ ಶಕ್ತಿ ಶ್ರೀರಾಯರಲ್ಲಿದೆ. ನಮ್ಮೆಲ್ಲರ ಭಕ್ತಿ ಪವಿತ್ರವಾದ ಭಕ್ತಿ ಶ್ರದ್ಧೆಗಳಿಂದ ಅವರನ್ನು ಸ್ಮರಿಸೋಣ, ಕಷ್ಟಗಳಿಂದ ಮುಕ್ತಿ ಪಡೆಯೋಣವೆಂದರು.

## ಕುರಿಮರಿಗಳ ಮೇಲೆ ದಾಳಿ ನಡೆಸಿದ ನಾಯಿಗಳ ಹಿಂಡು : ಏಳು ಕುರಿಮರಿ ಸಾವು

» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಭಾಗಗಳಲ್ಲಿ ನಾಯಿಗಳ ಹಿಂಡು ಕುರಿ ಮತ್ತು ದನಗಳ ಮೇಲೆ ದಾಳಿ ನಡೆಸುವುದು ಸ್ವಾಭಾವಿಕವಾಗಿದೆ. ನಾಯಿಗಳ ಹಿಂಡು ರಸ್ತೆಯುದ್ದಕ್ಕೂ ಕಿರುಚುತ್ತಾ ಸಿಕ್ಕ, ಸಿಕ್ಕ ಪ್ರಾಣಿಗಳ ಮೇಲೆ ದಾಳಿ ನಡೆಸುತ್ತಿವೆ.

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಜೆ.ಪಿ.ರಂಗಪ್ಪ ಬಡಾವಣೆಯ ಮಾರಣ್ಣ ಎಂಬುವವರಿಗೆ ಸೇರಿದ ಕುರಿಹಟ್ಟಿಯಲ್ಲಿ ಗುರುವಾರ ಬೆಳಗ್ಗೆ ನಾಯಿಗಳ ಹಿಂಡು ದಾಳಿ ನಡೆಸಿ ಕೇವಲ 15 ದಿನಗಳ ಹಿಂದೆ ಜನಿಸಿದ ಸುಮಾರು 7 ಕುರಿಮರಿಗಳನ್ನು ಎಲ್ಲಂದರಲ್ಲೆ ಕಚ್ಚಿಗಾಯಗೊಳಿಸಿ ಪರಾರಿಯಾಗಿವೆ. ನಾಯಿಗಳ ದಾಳಿಗೆ ತುತ್ತಾದ ಕುರಿಮರಿಗಳು ಸ್ಥಳದಲ್ಲೇ ಮೃತಪಟ್ಟಿವೆ. ನಾಯಿದಾಳಿಯಿಂದ ಕಂಗೆಟ್ಟ ಮಾರಣ್ಣ ಇತ್ತೀಚಿಷ್ಟೇ ಜನಿಸಿದ ಏಳು ಕುರಿಮರಿಗಳು ನಾಯಿದಾಳಿಗೆ ತುತ್ತಾಗಿವೆ ಎಂದು ನೋವು ವ್ಯಕ್ತಪಡಿಸಿದ್ದಾನೆ.

ಘಟನೆ ನಡೆದ ಸ್ಥಳಕ್ಕೆ ಪಶುವೈದ್ಯ ಇಲಾಖೆಯ ಸಹಾಯಕ ನಿರ್ದೇಶಕ ಡಾ.ರೇವಣ್ಣ, ಶಿವಣ್ಣ ಮುಂತಾದವರು ಭೇಟಿ ನೀಡಿ ಮೃತಪಟ್ಟ ಕುರಿಮರಿಗಳ ಶವಪರೀಕ್ಷೆ ನಡೆಸಿದರಲ್ಲದೆ, ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರಕ್ಕೆ ವರದಿ ಕಳಿಸುವ ಭರವಸೆ ನೀಡಿದರು.



**ಪ್ರಮುಖ ಸುದ್ದಿ**

# ಎರಡು ದಿನಗಳ ಪುನರ್ ಮನನ ಕಾರ್ಯಾಗಾರ

» ದಾವಣಗೆರೆ



ಇಂದಿನ ದಿನಗಳಲ್ಲಿ ಮಧ್ಯಸ್ಥಿಕೆದಾರರ ಭಾಗವಹಿಸಿಕೆ ಮೂಲಕ ಪ್ರಕರಣಗಳನ್ನು ಇತ್ಯರ್ಥ ಪಡಿಸುವುದು ಅತ್ಯುತ್ತಮ ಕಾರ್ಯವಾಗಿದೆ ಎಂದು ಪ್ರಧಾನ ಜಿಲ್ಲಾ, ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್ ಹೆಗ್ಡೆ ಹೇಳಿದರು.

ಕಳೆದ ಶನಿವಾರ ಮತ್ತು ಭಾನುವಾರ ಕರ್ನಾಟಕ ಮಧ್ಯಸ್ಥಿಕೆ ಕೇಂದ್ರ ಬೆಂಗಳೂರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ದಾವಣಗೆರೆ ಇವರ ಸಹಯೋಗದಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದಾವಣಗೆರೆ, ಹಾವೇರಿ ಮತ್ತು ಚಿತ್ರದುರ್ಗದ ವಕೀಲ ಸಂಧಾನಕಾರರಿಗೆ ಏರ್ಪಡಿಸಲಾದ ಎರಡು ದಿನಗಳ ಪುನರ್-ಮನನ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತಾನಾಡಿದರು.

ಮಧ್ಯಸ್ಥಿಕದಾರರು ನ್ಯಾಯ ಕೋರಿ ಬಂದ ಪಕ್ಷಕಾರರಿಗೆ ಕಾನೂನು ಮಾಹಿತಿ ನೀಡುವುದಷ್ಟೆ ಅಲ್ಲದೆ ಸಾಮಾಜಿಕ ಮತ್ತು ನೈತಿಕ ಮೌಲ್ಯಗಳನ್ನು ತಿಳಿಸಿ ಕೊಡುವುದರಿಂದ ಪಕ್ಷಕಾರರಿಗೆ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ನಿರ್ವಹಿಸುವ ಕಾರ್ಯಗಳ ಮೂಲಕ ಅನುಕೂಲವಾಗುತ್ತದೆ. ಮಧ್ಯಸ್ಥಿಕೆದಾರರ ಈ ರೀತಿಯ ಕಾರ್ಯಗಳು ನಿಜವಾಗಲೂ ಶ್ಲಾಘನೀಯ. ಮಧ್ಯಸ್ಥಿಕೆದಾರರಿಂದ ವ್ಯಾಜ್ಯ ಮುಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರು ಮಾತನಾಡಿ ಇಂದಿನ ದಿನಗಳಲ್ಲಿ ಜನರಿಗೆ ಕಾನೂನು ಮಾಹಿತಿ ನೀಡುವುದುಅತ್ಯವಶ್ಯಕವಾಗಿರುವುದರಿಂದ ವಕೀಲರು ಮತ್ತು ಸಂಧಾನಕಾರರ ಪಾತ್ರ ಬಹು ಮುಖ್ಯವಾಗಿದೆ.ಮಧ್ಯಸ್ಥಿಕೆಯುಪ್ರಕರಣಗಳ ಶೀಘ್ರವಿಲೇವಾರಿಗೆಅನುಕೂಲಕರವಾಗಿದ್ದು ಕಡಿಮೆ ಖರ್ಚು ಮತ್ತು ಸಮಯ ಉಳಿತಾಯದ ಮಾರ್ಗವಾಗಿದೆ. ಅಲ್ಲದೆ ನ್ಯಾಯಾಲಯಗಳ ಮೇಲಿನ ಒತ್ತಡವನ್ನು ಕಡಿಮೆ ಮಾಡುವಲ್ಲಿ ಇದು ಉತ್ತಮ ಸಾಧನವಾಗಿದೆ ಎಂದು ತಿಳಿಸಿದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರು ಮತ್ತು ಸಂಧಾನಕಾರರಾದ ಅರುಣ್ ಕುಮಾರ್ ಎಲ್ ಎಚ್ ಮಾತನಾಡಿ ಮಧ್ಯಸ್ಥಿಕೆಯ ಮೂಲಕ ವ್ಯಾಜ್ಯಗಳು ಬಗೆಹರಿದಲ್ಲಿ ರಾಜ್ಯದಲ್ಲಿ ಶಾಂತಿ ಮತ್ತು ನೆಮ್ಮದಿ ನೆಲೆಸುತ್ತದೆ ಎಂದು ತಿಳಿಸಿದರು.

ತರಬೇತಿದಾರರಾದ ಶೋಭಾ ಪಾಟೀಲ್, ಲತಾ ಪ್ರಸಾದ್, ಟಿ.ಎಂ ಅನ್ನಪೂರ್ಣ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಆ.28 ರಿಂದ ಸೆ.9 ರವರೆಗೆ ಉದ್ಯಮಶೀಲತಾ ತರಬೇತಿ

» **ಚಿತ್ರದುರ್ಗ**

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಧಾರವಾಡದ ಸಿಡಾಕ್ ಕೇಂದ್ರದಿಂದ ಸ್ವಯಂ ಉದ್ಯೋಗ ಕೈಗೊಳ್ಳಲು ಇಚ್ಛಿಸುವ ಜಿಲ್ಲೆಯ ಉದ್ಯಮಾಕಾಂಕ್ಷಿಗಳಿಗೆ ಚಿತ್ರದುರ್ಗದ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ವಸತಿರಹಿತ 10 ದಿನಗಳ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿಯಲ್ಲಿ ಉದ್ಯಮಶೀಲರ ಗುಣಲಕ್ಷಣಗಳು, ಸಾಮಾನ್ಯ ವ್ಯಕ್ತಿಯಿಂದ ಉದ್ಯಮಶೀಲ ವ್ಯಕ್ತಿಯಾಗಿ ಪರಿವರ್ತನೆಯಾಗಲು ಸಾಧನಾ, ಪ್ರೇರಣ, ತರಬೇತಿ, ಉದ್ಯಮ ಸ್ಥಾಪಿಸಲು ಅನುಸರಿಸಬೇಕಾದ ಮಜಲುಗಳು, ಉದ್ಯಮಾವಕಾಶಗಳ ಮಾಹಿತಿ, ಉದ್ಯಮ ಆಯ್ಕೆಯ ವಿಧಾನ, ಹಣಕಾಸು ನಿರ್ವಹಣೆ, ಮಾರುಕಟ್ಟೆ ನಿರ್ವಹಣೆ, ಲೆಕ್ಕಪತ್ರ ನಿರ್ವಹಣೆ, ಸಣ್ಣ ಉದ್ಯಮ ನಿರ್ವಹಣೆ ಇತ್ಯಾದಿ ವಿಷಯಗಳನ್ನು ಪರಿಣಿತ ಅತಿಥಿ ಬೋಧಕರಿಂದ ಉಪನ್ಯಾಸಗಳನ್ನು ಏರ್ಪಡಿಸುವುದರ ಜೊತೆಗೆ ಶಿಬಿರಾರ್ಥಿಗಳು ಉದ್ಯಮ ಪ್ರಾರಂಭಿಸಲು ಬೆಂಬಲಸೇವೆಯನ್ನು ಸಹ ಒದಗಿಸಲಾಗುವುದು.

ಆಗಸ್ಟ್ 28 ರಿಂದ ಸೆಪ್ಟೆಂಬರ್ 9 ರವರೆಗೆ ಉದ್ಯಮಶೀಲತಾಭಿವೃದ್ಧಿ ತರಬೇತಿ ನಡೆಯಲಿದೆ. ಆಸಕ್ತ 18 ರಿಂದ 55 ವರ್ಷ ವಯೋಮಿತಿ ಹೊಂದಿರುವ, 10ನೇ ತರಗತಿ ಪಾಸಾದ ಉದ್ಯಮಾಕಾಂಕ್ಷಿಗಳು ನಗರದ ಜೋಗಿಮಟ್ಟಿ ರಸ್ತೆ, ಜಿಲ್ಲಾ ಕೈಗಾರಿಕಾ ಕೇಂದ್ರದ ಸಿಡಾಕ್ ಜಂಟಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು 2 ಪಾಸ್‌ಪೋರ್ಟ್ ಅಳತೆಯ ಫೋಟೋ ಹಾಗೂ ಆಧಾರ್ ಕಾರ್ಡ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮ ಉಚಿತವಾಗಿದ್ದು, ತರಬೇತಿ ವೇಳೆಯಲ್ಲಿ ಊಟೋಪಚಾರ ಒದಗಿಸಲಾಗುವದು. ಆಯ್ಕೆಯಾದ ಶಿಬಿರಾರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿ ಪ್ರಯಾಣ ಮಾಡಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಿಡಾಕ್ ತರಬೇತುದಾರ ಪಿ. ವಿಜಯ ಕುಮಾರ ದೂರವಾಣಿ ಸಂಖ್ಯೆ 7760270058 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಮಡಿವಾಳ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ

» **ದಾವಣಗೆರೆ**

ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದಿಂದ ವಿನೋಬಾ ನಗರದಲ್ಲಿನ ಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ಮಡಿವಾಳ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುತ್ತಿದ್ದು, 2023-24ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕಗಳನ್ನು ಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಹ ವಿದ್ಯಾರ್ಥಿಗಳು ಆಗಸ್ಟ್ 23ರೊಳಗೆ ಸ್ವವಿವರವುಳ್ಳ ಅರ್ಜಿಗಳನ್ನು ವಿನೋಬಾ ನಗರದ 1ನೇ ಮುಖ್ಯರಸ್ತೆಯ, 17ನೇ ತಿರುವಿನಲ್ಲಿನ ಮಡಿವಾಳ ಮಾಚಿದೇವ ಸಮುದಾಯ ಭವನ, ದಾವಣಗೆರೆ ಇಲ್ಲಿಗೆ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿಯುಸಿ ಅಂಕಪಟ್ಟಿ, ವರ್ಗಾವಣೆ ಪತ್ರ (ಟಿಸಿ), ತಮ್ಮ ಇತ್ತೀಚಿನ ಪಾಸ್‌ಪೋರ್ಟ್ ಭಾವಚಿತ್ರಗಳೊಂದಿಗೆ ತಮ್ಮ ದಾಖಲಾತಿಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ಎಂ.ನಾಗೇಂದ್ರಪ್ಪ- 9448000077, ಆರ್.ಎನ್.ಧನಂಜಯಪ್ಪ-9844001462, ಸುರೇಶ್ ಎಂ.ಕೋಗುಂಡೆ- 9880497271, ಸಿ.ಗುಡ್ಡಪ್ಪ- 8892624949, ಪಿ.ಮಂಜುನಾಥ್- 9980087033ಗೆ ಸಂಪರ್ಕಿಸಬಹುದು.

### ನಾಗಪುರ ದೀಕ್ಷಾ ಭೂಮಿ ಯಾತ್ರೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಮುಂಬರುವ ಅಕ್ಟೋಬರ್ 12 ತಾರೀಕಿನ ಶನಿವಾರದ ವಿಜಯದಶಮಿ ದಿನದಂದು ಮಹಾರಾಷ್ಟ್ರದ ನಾಗಪುರ ದೀಕ್ಷಾಭೂಮಿಯಲ್ಲಿ ನಡೆಯುವ ದಮ್ಮ ಪ್ರವರ್ತನ ದಿನ ಕಾರ್ಯಕ್ರಮಕ್ಕೆ ತೆರಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 15 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಆಗಸ್ಟ್ 31 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ.ಪ್ರತಿ ವರ್ಷದಂತೆ ಅಕ್ಟೋಬರ್ 10 ರಿಂದ 14ರವರೆಗೆ ನಾಗಪುರ ದೀಕ್ಷಾಭೂಮಿ ಯಾತ್ರೆಗೆ ತೆರಳಲು ಸಾರಿಗೆ ವ್ಯವಸ್ಥೆ, ರೈಲಿನ ವ್ಯವಸ್ಥೆ ಕಲ್ಪಿಸುವ ಸಂಬಂದ, ರಾಜ್ಯದ ಡಾ.ಬಿ.ಆರ್. ಅಂಬೇಡ್ಕರ್ ಅನುಯಾಯಿಗಳನ್ನು ಆಯ್ಕೆ ಮಾಡಲಾಗುವುದು. ಯಾತ್ರಿಗಳು ಬಿ.ಪಿ.ಎಲ್. ಕಾರ್ಡ ಹೊಂದಿರಬೇಕು. ಎಸ್.ಟಿ, ಎಸ್.ಸಿ ಸಮುದಾಯಕ್ಕೆ ಸೇರಿದವರಾಗಿರಬೇಕು. ಇತರೆ ಸಮುದಾಯದ ಜನರು ಬಾಬಾ ಸಾಹೇಬ್ ಅಂಬೇಡ್ಕರ್ ಅನುಯಾಯಿಗಳು ಅಹ ಯಾತ್ರೆ ಕೈಗೊಳ್ಳಬಹುದು. ಯಾತ್ರಾತ್ರಿಗಳು ಕನಿಷ್ಠ 18 ವರ್ಷ ಮೇಲ್ಪಟವರಾಗಿರಬೇಕು. ಡಾ.ಬಿ.ಆರ್. ಅಂಬೇಡ್ಕರ್ ರವರ ಚಿಂತನೆಗಳ ಬಗ್ಗೆ ಅರಿವು ಹೊಂದಿದ್ದು, ಸಮಾಜ ಸೇವೆ ಮಾಡಿದ ಅನುಭವ ಹೊಂದಿರಬೇಕು. ವಸತಿ ಮತ್ತು ಭೋಜನಾ ವೆಚ್ಚವನ್ನು ಯಾತ್ರಾರ್ಥಿಗಳೇ ಭರಿಸತಕ್ಕದ್ದು. ಆಸಕ್ತ ಯಾತ್ರಾರ್ಥಿಗಳು https://swdservice.karnataka.gov.in ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು

**ವಿಶೇಷ ಘಟಕ, ಗಿರಿಜನ ಉಪಯೋಜನೆ ಪ್ರಗತಿ ಪರಿಶೀಲನಾ ಸಭೆ**

# ಜನಸಂಖ್ಯೆ ಇಲ್ಲದ ಕಡೆ ಪರಿಶಿಷ್ಟರ ಅನುದಾನ ಬಳಕೆ ಮಾಡದಂತೆ ಕಟ್ಟೆಚ್ಚರ; ಡಿಸಿ ಗಂಗಾಧರಸ್ವಾಮಿ

» **ದಾವಣಗೆರೆ**

ಅನುಸೂಚಿತ ಜಾತಿ ಮತ್ತು ಬುಡಕಟ್ಟು ಯೋಜನೆಯಡಿ ಮೂಲಭೂತ ಸೌಕರ್ಯಗಳ ಸೃಜನೆ ವೇಳೆ ಈ ಜನಸಂಖ್ಯೆಯನ್ನಾಧರಿಸಿ ಧನ ವಿನಿಯೋಗವಾಗಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ ನೀಡಿದರು.

ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಎಸ್.ಸಿ.ಪಿ, ಟಿ.ಎಸ್.ಪಿ. ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅನುಸೂಚಿತ ಜಾತಿ ಮತ್ತು ಬುಡಕಟ್ಟು ಯೋಜನೆಯಡಿ ಮೀಸಲಿರಿಸಿದ ಅನುದಾನವನ್ನು ಆಸ್ತಿಗಳ ಸೃಜನೆ ಮತ್ತು ಮೂಲಭೂತ ಸೌಕರ್ಯಗಳನ್ನು ಸೃಜನೆ ಮಾಡುವಾಗ ಈ ವರ್ಗದ ಜನರು ಹೆಚ್ಚು ಇರುವ ಕಡೆ ಮತ್ತು ಅನುಕೂಲವಾಗುವ ನಿಟ್ಟಿನಲ್ಲಿ ಆಸ್ತಿಗಳ ಸೃಜನೆಯಾಗಬೇಕು. ಜನಸಂಖ್ಯೆಯೇ ಇಲ್ಲದ ಕಡೆ ಈ ಅನುದಾನ ಬಳಕೆ ಮಾಡಬಾರದೆಂದು ಸೂಚನೆ ನೀಡಿದರು.



ಎಸ್‌ಸಿಪಿ, ಟಿಎಸ್‌ಪಿ ಯೋಜನೆಯಡಿ ಈಗಾಗಲೇ ಇಲಾಖಾವಾರು ಕ್ರಿಯಾ ಯೋಜನೆಗಳು ಅನುಮೋದನೆಯಾಗಿ ಅನುದಾನವು ಬಿಡುಗಡೆಯಾಗಿದೆ. ಈ ಇಲಾಖೆಯವರು ಫಲಾನುಭವಿಗಳ ಯೋಜನೆಗಳಾಗಿದ್ದಲ್ಲಿ ಮುಂಚಿತವಾಗಿ ಅರ್ಜಿಯನ್ನು ಆಹ್ವಾನಿಸಿ ಫಲಾನುಭವಿಗಳ ಆಯ್ಕೆಯನ್ನು ಅಂತಿಮಗೊಳಿಸಿಟ್ಟುಕೊಳ್ಳಬೇಕು. ಹರಿಹರದ ಬೆಸ್ಕಾಂ ವಿಭಾಗಕ್ಕೆ ವಿದ್ಯುತ್ ಮೂಲಭೂತ ಸೌಕರ್ಯ ಸೃಜನೆಯಡಿ ಪ.ಜಾತಿಗೆ ರೂ.70 ಲಕ್ಷ ಮತ್ತು ಪ.ಪಂಗಡದವರಿಗೆ ರೂ.35 ಲಕ್ಷ ಬಿಡುಗಡೆಯಾಗಿದೆ ಎಂದು ಬೆಸ್ಕಾಂ ಅಧಿಕಾರಿಗಳು ಸಭೆಗೆ ತಿಳಿಸಿದರು. ಇದಕ್ಕೆ ಜಿಲ್ಲಾಧಿಕಾರಿಯವರು ಕಾಲಮಿತಿಯಲ್ಲಿ ಫಲಾನುಭವಿಗಳ ಆಯ್ಕೆಗೆ ಕ್ರಮ ವಹಿಸಬೇಕೆಂದು ತಿಳಿಸಿ ಅಧಿಕ ಮಳೆಯಿಂದ ಹೊನ್ನಾಳಿ ಆಸ್ಪತ್ರೆ ಒಳಗೆ ನೀರು ನುಗ್ಗಿದ್ದು ವಿದ್ಯುತ್ ಸಂಪರ್ಕದ ವೈರ್‌ಗಳ ಪರಿಶೀಲನೆ ನಡೆಸಿ ವರದಿ ನೀಡಲು ಸೂಚನೆ ನೀಡಿದರು.

ಎಸ್.ಸಿ.ಪಿ, ಟಿ.ಎಸ್.ಪಿ. ಕ್ರಿಯಾ ಯೋಜನೆಯನ್ವಯ ಜಿಲ್ಲೆಗೆ ಕೇಂದ್ರ, ರಾಜ್ಯ, ಜಿಲ್ಲೆ ಸೇರಿ ರೂ.345.5 ಕೋಟಿಗಳಷ್ಟು ಅನುದಾನ ನಿಗದಿ ಮಾಡಿದ್ದು ಇದರಲ್ಲಿ 125.31 ಕೋಟಿ ಬಿಡುಗಡೆ ಮಾಡಲಾಗಿದೆ. ಬಿಡುಗಡೆಯಾದ ಅನುದಾನದಲ್ಲಿ 98.82 ಕೋಟಿ ಖರ್ಚು ಮಾಡಲಾಗಿದೆ.

ನಿಗಧಿತ ಗುರಿಗೆ ಶೇ 28.60 ರಷ್ಟು ಸಾಧನೆ ಮಾಡಿದ್ದು ಬಿಡುಗಡೆಯಾದ ಅನುದಾನವನ್ನು ಶೇ 78.86 ರಷ್ಟು ವೆಚ್ಚ ಮಾಡಲಾಗಿದೆ. ಮುಂದಿನ ಸಭೆ ವೇಳೆಗೆ ಬಿಡುಗಡೆಯಾದ ಅನುದಾನಕ್ಕೆ ಶೇ 100 ರಷ್ಟು ಸಾಧನೆ ಮಾಡಿರಬೇಕೆಂದು ಎಲ್ಲಾ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರಾದ ಡಾ; ಮಹಂತೇಶ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೆ.ನಾಗರಾಜ್ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಯರ ಆರಾಧನಾ ಮಹೋತ್ಸವ ಸಂಭ್ರಮ

» **ಚಿತ್ರದುರ್ಗ**


ರಾಯರ 353ನೇ ಆರಾಧನಾ ಮಹೋತ್ಸವ ಸಂಭ್ರಮ ಮನೆ ಮಾಡಿದೆ. ನಗರದ ಆನೆ ಬಾಗಿಲ ಬಳಿಯಲ್ಲಿನ ಜಗದ್ಗುರು ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾ ಸಂಸ್ಥಾನ ನಂಜನಗೂಡು ಶ್ರೀ ರಘವೇಂದ್ರ ಸ್ವಾಮಿಗಳವರ ಬೃಂದಾವನ ಸನ್ನಿಧಾನದ ರಾಯರ ಮಠದಲ್ಲಿ ಆ.22ನೇ ಗುರುವಾರ : ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ನಡೆದಿದ್ದು, ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ಪ್ರಯುಕ್ತ ಮಹಾರ ಥೋತ್ಸವವು ಚಿತ್ರದುರ್ಗದ ರಾಜಬೀದಿಗಳಲ್ಲಿ ವಿವಿಧ ಭಜನಾಮಂಡಳಿಗಳು ಹಾಗೂ ಶ್ರೀ ಗುರುಸಾರ್ವಭೌಮರ ಭಕ್ತರೊಂದಿಗೆ ಜರುಗಿತು. ಉತ್ತರಾರಾಧನೆಯಲ್ಲಿ ಜನರ ಭಕ್ತಿ ಭಾವಕ್ಕೆ ಪರಾವಶವಾಗಿದೆ.

ಅಧಿಕ ಸಂಖ್ಯೆಯಲ್ಲಿ ಭಕ್ತಾಧಿಗಳು ಮಠಕ್ಕೆ ಆಗಮಿಸಿ ರಾಯರ ದರ್ಶನ ಪಡೆದರು. ರಾಯರಿಗೆ ವಿಶೇಷ ಅಲಂಕಾರ ಮಾಡಲಾಗಿತು ಗುರುವಾರ ಸಾಯಂಕಾಲ ಶ್ರೀ ರಾಘವೇಂದ್ರ ಸ್ವಾಮಿಗಳವರ ಸ್ಮರಣೆ ರೂಪಕ, ಚಿತ್ರದುರ್ಗದ ಶ್ರೀ ಗುರುರಾಜರ ಭಕ್ತರಿಂದ ನಡೆಸಲಾಯಿತು. ರಾಯರ ಮಠದ ಹೊರಗಡೆಯಲ್ಲಿ ಮರದಿಂದ ನಿರ್ಮಾಣ ಮಾಡಲಾದ ರಥವನ್ನು ವಿವಿಧ ರೀತಿಯ ಹೊಗಳಿಂದ ಆಲಂಕಾರವನ್ನು ಮಾಡಲಾಗಿತ್ತು. ರಥ ಹೂರಡುವುದಕ್ಕೊ ಮುನ್ನಾ ಅಲ್ಲಿ ನೆರದಿದ್ದ ಭಕ್ತಾಧಿಗಳಿಗೆ ಮಠದಿಂದ ಬಾಳೆ ಹಣ್ಣು, ತೆಂಗಿನಕಾಯಿ, ಹೂ ಹಾಗೂ ಚಿಲ್ಲರೆ ಹಣವನ್ನು ನೀಡಲಾಯಿತು. ಈ ರಥೋತ್ಸವದಲ್ಲಿ ಚಂಡೆ, ನಾಗಸ್ವಾರ, ಭಜನಾ ತಂಡಗಳು ಭಾಗವಹಿಸಿದ್ದವು ದಾರಿಯುದ್ದಕ್ಕೆ ನರದಿದ್ದ ಭಕ್ತಾಧಿಗಳು ರಾಯರ ಪರವಾದ



ಘೋಷಣೆಗಳನ್ನು ಕೂಗುವುದರ ಮೂಲಕ ನಾಮ ಸ್ಮರಣೆಯನ್ನು ಮಾಡಿದರು. ರಾಯರ ಮಠದಿಂದ ಪ್ರಾರಂಭವಾದ ರಥೋತ್ಸವವು ಆನೆಬಾಗಿಲು, ಚಿಕ್ಕಪೇಟೆ, ಸಂತೇಪೇಟೆ ವೃತ್ತದಿಂದ ಮರಳಿ ವಾಪಾಸ್ಸು ರಾಯರ ಮಠವನ್ನು ತಲುಪಿತ್ತು. ಬೆಳಿಗ್ಗೆ ನಿರ್ಮಾಲ್ಯ ಅಷ್ಟೋತ್ತರ ಸಹಿತ ಫಲಪಂಚಾಮೃತ ಅಭಿಷೇಕ ಉತ್ಸವರಾಯರ ಪಾದ ಪೂಜೆ, ಕನಕಾಭಿಷೇಕ ನೈವೇದ್ಯ, ಅಲಂಕಾರ ಪಂಕ್ತಿ, ಹಸ್ತೋದಕ, ಮಹಾಮಂಗಳಾರತಿ, ತೀರ್ಥ ಪ್ರಸಾದ ಭಜನಾ ಕಾರ್ಯಕ್ರಮ ಸಾಂಸ್ಕೃತಿಕ ಕಾರ್ಯಕ್ರಮ ರಜತ ರಥೋತ್ಸವ, ಸ್ವಸ್ತಿವಾಚನ, ಅಷ್ಟಾವಧಾನ, ಮಹಾ ಮಂಗಳಾರತಿ. ಕಾರ್ಯಕ್ರಮ ನಡೆಯಿತು. ಆ 23 ನೇ ಶುಕ್ರವಾರ ಶ್ರೀ ಸುಜ್ಞಾನೇಂದ್ರತೀರ್ಥರ ಆರಾಧನೆ, ಪವಮಾನ ಹೋಮ, ಸರ್ವಸಮರ್ಪಣೋತ್ಸವ ಕಾರ್ಯಕ್ರಮ ನಡೆಯಲಿದೆ. ಶುಕ್ರವಾರ ಬೆಳಿಗ್ಗೆ 11.00 ರಿಂದ ಭಜನೆ ಶ್ರೀ ಬ್ರಹ್ಮಚೈತನ್ಯ ಮಹಿಳಾ ಭಜನಾ ಮಂಡಳಿಯವರಿಂದ ಸಂಜೆ 5.30 ರಿಂದ 7.30ರವರೆಗೆ ಚಂಪಕ ಶ್ರೀಧರ್ ಮತ್ತು ಶಿಷ್ಯವೃಂದ ದವರಿಂದ ಕರ್ನಾಟಕ ಸಂಗೀತ ಕಾರ್ಯಕ್ರಮ ನಡೆಯಲಿದೆ.

## ಆರಾಧನಾ ಪ್ರಯುಕ್ತ ರಾಯರಿಗೆ ವಿಶೇಷ ಅಲಂಕಾರ



» **ಚಿತ್ರದುರ್ಗ**

ನಗರದ ಆನೆ ಬಾಗಿಲ ಬಳಿಯಲ್ಲಿನ ಜಗದ್ಗುರು ಶ್ರೀಮನ್ ಮಧ್ವಾಚಾರ್ಯ ಮೂಲ ಮಹಾ ಸಂಸ್ಥಾನ ನಂಜನಗೂಡು ಶ್ರೀ ರಘವೇಂದ್ರ ಸ್ವಾಮಿಗಳವರ ಬೃಂದಾವನ ಸನ್ನಿಧಾನದ ರಾಯರ ಮಠದಲ್ಲಿ ರಾಯರ 353ನೇ ಆರಾಧನಾ ಮಹೋತ್ಸವ ಸಂಭ್ರಮ ಮನೆ ಮಾಡಿತ್ತು ಕಳೆದ ಎರಡು ದಿನಗಳಿಂದ ರಾಯರ ಮಠದಲ್ಲಿ ರಾಯರ ಆರಾಧನೆಯಲ್ಲಿ ಭಕ್ತಾಧಿಗಳು ಭಕ್ತಿಯಲ್ಲಿ ಮಿಂದು ಹೋಗಿದ್ದರು. ತಮ್ಮ ಆರಾದ್ಯ ದೇವರಾಧ ಗುರು ರಾಯರ ಬಳಿ ತಮ್ಮ ಕಷ್ಟಗಳನ್ನು ಹೇಳುವುದರ ಮೂಲಕ ಅವುಗಳನ್ನು ಪರಿಹಾರ ಮಾಡಿ ನೆಮ್ಮದಿಯನ್ನು ನೀಡುವಂತೆ ಬೇಡಿಕೊಂಡರು.

ಆ.22ನೇ ಗುರುವಾರ ಬೆಳಿಗ್ಗೆ ಶ್ರೀ ಗುರುಸಾರ್ವಭೌಮರ ಉತ್ತರಾರಾಧನೆ ಪ್ರಯುಕ್ತ ಮಹಾರಥೋತ್ಸವವು ಚಿತ್ರ ದುರ್ಗದ ರಾಜಬೀದಿಗಳಲ್ಲಿ ವಿವಿಧ ಭಜನಾಮಂಡಳಿಗಳು ಹಾಗೂ ಶ್ರೀ ಗುರುಸಾರ್ವಭೌಮರ ಭಕ್ತರೊಂದಿಗೆ ಜರುಗಿತು. ಇದಾದ ನಂತರ ರಾಯರ ಮಠದಲ್ಲಿ ರಾಯರ ಬೃಂದಾವನಕ್ಕೆ ವಿಶೇಷವಾದ ಆಲಂಕಾರವನ್ನು ಮಾಡಲಾಗಿತ್ತು ಇದರಲ್ಲಿ ವಿಶೇಷವಾಗಿ ಹೂ ಹಾಗೂ ಹಣ್ಣುಗಳ ಆಲಂಕಾರದಲ್ಲಿ ರಾಯರು ಬೃಂದಾವನ ವಿಶೇಷವಾಗಿ ಕಾಣುತ್ತಿತು. ಇದರಲ್ಲಿ ಕಿತ್ತಳೆ, ಬಿಕ್ಕೆಹಣ್ಣು, ಆನಾನಸ್, ಮೊಸುಂಬೆ, ಧಾಳಿಂಬೆ, ಸೇಬುಗಳನ್ನು ಬಳಸಿ ಅಲಂಕಾರವನ್ನು ಮಾಡಲಾಗಿತು. ಇದರ ಮಧ್ಯದಲ್ಲಿ ರಾಯರ ಬೃಂದಾವನಕ್ಕೆ ದಾಕ್ಷಿಯಿಂದ ಮಾಡಿದ ಹಾರವನ್ನು ಹಾಕಲಾಗಿತ್ತು. ಇದರೊಂದಿಗೆ ತುಳಸಿಯನ್ನು ಸಹಾ ಬಳಕೆ ಮಾಡಲಾಗಿತ್ತು.

ಬೃಂದಾವನದ ಮುಂದಗಡೆಯಲ್ಲಿ ಶ್ರೀ ಕೃಷ್ಣನ ವಿಗ್ರಹಕ್ಕೆ ಗೂರಟೆ ಹೂ. ಮಲ್ಲಿಗೆ ಹಾಗೂ ಕಾಕಡ ಹೂಗಳಿಂದ ಆಲಂಕಾರವನ್ನು ಮಾಡಲಾಗಿತ್ತು. ಬೃಂದಾವನದ ಮೇಲೆ ಪ್ರತಿಷ್ಠಾಪನೆ ಮಾಡಲಾದ ಅಂಜನೇಯ ಸ್ವಾಮಿಯ ಬೆಳ್ಳಿ ವಿಗ್ರಹಕ್ಕೂನ ಸಹಾ ವಿವಿಧ ಹೂ ಹಾಗೂ ಹಣ್ಣುಗಳಿಂದ ಆಲಂಕಾರವನ್ನು ಮಾಡಲಾಗಿತ್ತು.

## ಕ್ರೀಡಾ ಪದಕ ಪಡೆದವರಿಂದ ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಕೇಂದ್ರ ಸರ್ಕಾರದಿಂದ ಮಾನ್ಯತೆ ಪಡೆದ ರಾಷ್ಟ್ರೀಯ ಕ್ರೀಡಾ ಸಂಸ್ಥೆಗಳು ಆಯೋಜಿಸುವ ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಪದಕ ಪಡೆದ ಕ್ರೀಡಾಪಟುಗಳಿಗೆ ಪ್ರಸಕ್ತ ಸಾಲಿಗೆ ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಕ್ರೀಡಾಪಟುಗಳು ಅರ್ಜಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಸೆಪ್ಟೆಂಬರ್ 18 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿಗೆ ಸಲ್ಲಿಸಲು ಸಹಾಯಕ ನಿರ್ದೇಶಕಿ ಜಯಲಕ್ಷ್ಮಿಬಾಯಿ ತಿಳಿಸಿದ್ದಾರೆ

**ಪ್ರಮುಖ ಸುದ್ದಿ**

**ಪಂಡರಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ.ಅಕ್ಷತಾ ಅಭಿಮತ**

# ಉತ್ತಮ ಪೋಷಣೆಗೆ ಆರೋಗ್ಯಕರ ಆಹಾರ ಅತ್ಯಗತ್ಯ

» **ಚಿತ್ರದುರ್ಗ**

ಉತ್ತಮ ಆರೋಗ್ಯ ಮತ್ತು ಪೋಷಣೆಗೆ ಆರೋಗ್ಯಕರ ಆಹಾರ ಅತ್ಯಗತ್ಯ ಎಂದು ಪಂಡರಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ.ಅಕ್ಷತಾ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಪಂಡರಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಗುರುವಾರ ಆರೋಗ್ಯ ಇಲಾಖೆ, ಎಸ್‌ಆರ್‌ಎಸ್ ಆಸ್ಕರ್ ಹಿರಿಯ ಪ್ರಾಥಮಿ ಶಾಲೆಯ ಸಹಯೋಗದೊಂದಿಗೆ ಸಮುದಾಯ ಆರೋಗ್ಯ ಶಿಕ್ಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉತ್ತಮ ಆರೋಗ್ಯ ಮತ್ತು ಪೋಷಣೆಗೆ ಆರೋಗ್ಯಕರ ಆಹಾರ ಹೃದ್ರೋಗ, ಮಧುಮೇಹ ಮತ್ತು ಕ್ಯಾನ್ಸರ್‌ನಂತಹ ದೀರ್ಘಕಾಲದ ಸಾಂಕ್ರಾಮಿಕವಲ್ಲದ ಕಾಯಿಲೆಗಳಿಂದ ನಿಮ್ಮನ್ನು ರಕ್ಷಿಸುತ್ತದೆ. ಆರೋಗ್ಯಕರ ಆಹಾರಕ್ಕಾಗಿ ವಿವಿಧ ಆಹಾರಗಳನ್ನು ತಿನ್ನುವುದು ಮತ್ತು ಕಡಿಮೆ ಉಪ್ಪು, ಸಕ್ಕರೆಗಳು ಮತ್ತು ಸ್ಯಾಚುರೇಟೆಡ್ ಮತ್ತು ಕೈಗಾರಿಕಾ-ಉತ್ಪಾದಿತ ಟ್ರಾನ್ಸ್-




ಕೊಬ್ಬುಗಳನ್ನು ಸೇವಿಸುವುದು ಅತ್ಯಗತ್ಯ ಎಂದು ತಿಳಿಸಿದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಮಾಹಿತಿ ಶಿಕ್ಷಣ ನೀಡಿ, ಆರೋಗ್ಯಕರ ಆಹಾರವು ವಿವಿಧ ಆಹಾರಗಳ ಸಂಯೋಜನೆ ಒಳಗೊಂಡಿದೆ. ಆರೋಗ್ಯಕರ ಆಹಾರವು ಜೀವನದ ಆರಂಭದಲ್ಲಿ ಪ್ರಾರಂಭವಾಗುತ್ತದೆ. ಸ್ತನ್ಯಪಾನವು ಆರೋಗ್ಯಕರ ಬೆಳವಣಿಗೆ ಉತ್ತೇಜಿಸುತ್ತದೆ ಮತ್ತು ದೀರ್ಘಾವಧಿಯ ಆರೋಗ್ಯ ಪ್ರಯೋಜನ ಪಡೆಯಬಹುದು. ಅಧಿಕ ತೂಕ ಅಥವಾ ಬೊಜ್ಜು ಆಗುವ ಅಪಾಯ ಕಡಿಮೆ ಮಾಡುತ್ತದೆ ಎಂದರು.

ಆರೋಗ್ಯಕರ ಆಹಾರಕ್ಕಾಗಿ ಜನ್ಮದಿಂದ 6 ತಿಂಗಳವರೆಗೆ ಶಿಶುಗಳಿಗೆ ತಾಯಿಯ ಹಾಲನ್ನು ಮಾತ್ರ ನೀಡುವುದು ಮುಖ್ಯವಾಗಿದೆ. ನಿಮ್ಮ ಮಗುವಿಗೆ ಎರಡು ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನವರೆಗೆ ಸ್ತನ್ಯಪಾನ ಮುಂದುವರಿಸುವಾಗ, 6 ತಿಂಗಳ ವಯಸ್ಸಿನಲ್ಲಿ ವಿವಿಧ ಸುರಕ್ಷಿತ ಮತ್ತು ಪೌಷ್ಟಿಕ ಪೂರಕ ಆಹಾರ ಪರಿಚಯಿಸುವುದು ಮುಖ್ಯವಾಗಿದೆ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಎಲ್ಲಾ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಬಗ್ಗೆ ತಿಳಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಪ್ರಸನ್ನ ಐಯೋಡಿನ್ ಉಪ್ಪಿನ ಬಳಕೆ ಬಗ್ಗೆ ತಿಳಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರ ರೆಡ್ಡಿ ಅವರು ಕೀಟಜನ್ಯ ವಾಯುಜನ್ಯ ಮತ್ತು ಜಲಜನ್ಯ ರೋಗಗಳ ಮುನ್ನೆಚ್ಚರಿಕಾ ಕ್ರಮದ ಬಗ್ಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಕೃಷ್ಣಪ್ಪ, ಸಿದ್ದೇಶ್, ಪ್ರಸನ್ನಾ ಗಂಗಾಧರ, ಆರೋಗ್ಯ ಸುರಕ್ಷತಾಧಿಕಾರಿಗಳಾದ ಮಮತಾ, ಆಶಾ, ಶಾರದ ಬಾಯಿ, ಎಸ್.ಆರ್.ಎಸ್ ಆಸ್ಕರ್ ಹಿರಿಯ ಪ್ರಾಥಮಿಕ ಶಾಲೆಯ ಸಂಯೋಜಕಿ ಪಇ. ಶೈಲಾ, ಶಿಕ್ಷಕರಾದ ಶಾಂಬವಿ, ಅನುರಾದ, ಮಧು ಇದ್ದರು.

# ಮಕ್ಕಳಿಗೆ ಒಳ್ಳೆಯ ಸಂಸ್ಕಾರ ಮತ್ತು ನಡತೆ ಕಲಿಸಬೇಕು ಎಂಬುದು ಆಧುನಿಕ ಕಾಲದ ಬಹುದೊಡ್ಡ ಆಶಯ

ಮಾಧ್ಯಮಗಳಲ್ಲೂ ಅನೇಕ ವೇದಿಕೆಗಳಲ್ಲೂ ಇದೇ ಬಹು **ಚರ್ಚಿತ ವಿಷಯ**













ಅಂದರೆ ಬಹಳಷ್ಟು ದೊಡ್ಡವರಲ್ಲಿಲ್ಲದ , ಸಮಾಜದಲ್ಲಿ ತನ್ನ ಅಸ್ತಿತ್ವ ಕಳೆದುಕೊಳ್ಳುತ್ತಿರುವ ಅಥವಾ ಮುಖವಾಡಗಳಾಗಿ ಬದಲಾಗುತ್ತಿರುವ ನಿಜವಾದ ಮೌಲ್ಯಗಳನ್ನು ಅದರ ಮೂಲ ಸ್ವರೂಪದಲ್ಲಿಯೇ ಮಕ್ಕಳಲ್ಲಿ ಕಾಣಬೇಕೆಂಬ ಹಂಬಲ ಪೋಷಕರದು. ಇದರಿಂದಾಗಿ ಒಳ್ಳೆಯ ಭವಿಷ್ಯ ರೂಪಗೊಳ್ಳುತ್ತದೆ ಎಂದು ಆಸೆಪಡುತ್ತಿದ್ದಾರೆ.

ಆಪೇಕ್ಷೆ ಏನೋ ಒಳ್ಳೆಯದು.

ಆದರೆ ವಾಸ್ತವ.

ವಿಚಿತ್ರವೆಂದರೆ,

ಭಾರತದಲ್ಲಿ ಮಾತ್ರವಲ್ಲ ಇಡೀ ವಿಶ್ವದಲ್ಲಿಯೇ ಯಾವ ತಂದೆ ತಾಯಿಗಳು ತಮ್ಮ ಮಕ್ಕಳಿಗೆ ಕೆಟ್ಟದ್ದನ್ನು ಹೇಳಿಕೊಡುವುದಿಲ್ಲ. ತಾವು ಕಳ್ಳರಾದರೂ ತಮ್ಮ ಮಕ್ಕಳು ಮಾತ್ರ ಉತ್ತಮ ದಾರಿ ಹಿಡಿಯಲಿ ಎಂದೇ ಇಚ್ಛಿಸುತ್ತಾರೆ.

ಆದರೆ ಬಹಳಷ್ಟು ಮಕ್ಕಳು ತಮ್ಮ ನಡವಳಿಕೆಗಳಲ್ಲಿ ನಾವು ಹೇಳುವುದನ್ನು ಮಾಡುವುದು ಕಡಿಮೆ ಅಥವಾ ಮಾಡಿದಂತೆ ನಟಿಸುತ್ತಾರೆ.

ವಾಸ್ತವದಲ್ಲಿ ಅವರು ಗ್ರಹಿಸುವುದು ನಾವು ಹೇಳುವುದನ್ನಲ್ಲ ಮಾಡುವುದನ್ನು.

ದೊಡ್ಡವರನ್ನು ಅನುಕರಿಸುವದೇ ಅವರ ಮೊದಲ ಮತ್ತು ಸುಲಭ ಆಯ್ಕೆ. .

ಮನೆಯಲ್ಲಿ ನಾವು ಹಾಡು ಹೇಳಿದರೆ, ನೃತ್ಯ ಮಾಡಿದರೆ, ಯೋಗ ವ್ಯಾಯಾಮ ಮಾಡಿದರೆ, ಸಿಗರೇಟ್ ಸೇದಿದರೆ ಅದನ್ನು ಅನುಕರಿಸಲು ಪ್ರಯತ್ನಿಸುತ್ತಾರೆ.

ನಾವು ಮೊಬೈಲ್ ನಲ್ಲಿ ಮಾತನಾಡುವಾಗ ಯಾರನ್ನಾದರು ಕೆಟ್ಟ ಮಾತಿನಲ್ಲಿ ಬೈದರೆ ಅಥವಾ ಕಾಣುವಂತ ಸುಳ್ಳು ಹೇಳಿದರೆ ತಕ್ಷಣಕ್ಕಲ್ಲದಿದ್ದರೂ ಅವಶ್ಯಕತೆ ಒದಗಿ ಬಂದಾಗ ಅದನ್ನು ಶಾಲೆಯೋ ಅಥವಾ ಇನ್ನೆಲ್ಲಾದರೂ ಪ್ರಯೋಗಿಸುತ್ತಾರೆ.

ಅವರನ್ನು ಶಾಲೆಗೆ ಕರೆದೊಯ್ಯುವ ಬಸ್ಸು ಆಟೋ ವ್ಯಾನುಗಳ ಡ್ರೈವರುಗಳ, ಆಯಾಗಳ ಮಾತು ಚಟುವಟಿಕೆ ಅವರನ್ನು ಹೆಚ್ಚು ಸೆಳೆಯುತ್ತದೆ.

ಶಾಲೆ ಮತ್ತು ಮನೆಯ ಸುತ್ತಲಿನ ವಾತಾವರಣದ ಅದರಲ್ಲೂ ಆಕ್ರಮಣಕಾರಿ ವರ್ತನೆಗಳು ಅವರನ್ನು ಬೇಗ ಆಕರ್ಷಿಸುತ್ತದೆ. ಇನ್ನು ಟಿವಿ ಸಿನಿಮಾ ಇಂಟರ್ನೆಟ್ ಗಳ ಅತಿರೇಕದ ಪ್ರಭಾವದಿಂದ ಅವರು ತಪ್ಪಸಿಕೊಳ್ಳುವುದು ಕಷ್ಟ.

ಇದರ ಅರ್ಥ,

ಮೂಲಭತವಾಗಿ ಸಂಸ್ಕಾರಗಳನ್ನು ಹೇಳಿಕೊಡುವುದರಿಂದ ಹೆಚ್ಚನ ಪ್ರಯೋಜನವಿಲ್ಲ.

ವಾಹನ ಚಲಾಯಿಸಲು ಪುಸ್ತಕದಲ್ಲಿ ನೋಡಿ ಕಲಿತಷ್ಟೇ ಪ್ರಯೋಜನ. ನಿಜವಾದ ಪರಿಣಾಮ ಸಮಾಜದ ಈಗಿನ ನಡವಳಿಕೆಗಳೇ ಅವರನ್ನು ರೂಪಿಸುತ್ತವೆ.

ನಮ್ಮಂತ ದೊಡ್ಡವರಿಗೇ ಇನ್ನು ಸರಿಯಾದ ಸಂಸ್ಕಾರ ಇಲ್ಲದಿರುವಾಗ ಪುಟ್ಟ ಮಕ್ಕಳಿಗೆ ಅದನ್ನು ಕಲಿಸುವುದು ಹೇಗೆ.

ನಿಜವಾದ ಸಂಸ್ಕಾರ ಬೇಕಾಗಿರುವುದು ದೊಡ್ಡವರಿಗೆ.

ಏಕೆಂದರೆ, 0/15 ವರ್ಷದ ಮಕ್ಕಳು ದೊಡ್ಡ ತಪ್ಪು ಮಾಡುವುದು ತುಂಬಾ ಕಡಿಮೆ. 18/20 ತುಂಬುತ್ತಿದ್ದಂತೆ ಸಮಾಜಕ್ಕೆ ತೆರೆದುಕೊಳ್ಳುವ ಅವರು ತಮ್ಮ ವಯೋಸಹಜ ಬದಲಾವಣೆಗಳಿಂದ ಇಲ್ಲಿನ ನಡವಳಿಕೆಗಳನ್ನೇ ಅಳವಡಿಸಿಕೊಳ್ಳಲು ಪ್ರಯತ್ನಿಸುತ್ತಾರೆ.

ಒಂದು ವೇಳೆ ಸಮಾಜದಲ್ಲಿ ಹೆಣ್ಣಿಗೆ ಸ್ವಾತಂತ್ರ್ಯ ಸಮಾನತೆ ಇದ್ದರೆ,

ಕುಡಿತದ ಬಗ್ಗೆ ಅಸಹ್ಯವಿದ್ದರೆ,

ಲಂಚದ ಬಗ್ಗೆ ಕೆಟ್ಟ ಅಭಿಪ್ರಾಯವಿದ್ದರೆ, ಶ್ರಮ ಸಂಸ್ಕೃತಿಯ ಬಗ್ಗೆ ಗೌರವವಿದ್ದರೆ, ಒಳ್ಳೆಯತನಕ್ಕೆ ಬೆಲೆಯಿದ್ದರೆ,

ಪ್ರತಿಭೆಗೆ ತಕ್ಕ ಮಾನ್ಯತೆ ಇದ್ದರೆ, ಮಕ್ಕಳೂ ಅದನ್ನೇ ಒಪ್ಪಿಕೊಳ್ಳಲು ಪ್ರಯತ್ನಿಸುತ್ತಾರೆ.

ಅಥವಾ,

ಇಲ್ಲಿ ಹೆಂಗಸರನ್ನು ಚುಡಾಯಿಸುವವನು ಮಹಾನ್ ಗಂಡಸೆಂತಲೂ,

ಬೈಕ್ ವೀಲಿಂಗ್ ಮಾಡುವವನನ್ನು

ಧೀರನೆಂತಲೂ, ಕಾನೂನು ಉಲ್ಲಂಘಿಸುವವನನ್ನು ಶೂರನೆಂತಲೂ,

ಮೋಸದಿಂದಾರೂ ಹಣ ಮಾಡುವವನನ್ನು ಯಶಸ್ವಿ ವ್ಯಕ್ತಿಯಂತಲೂ ಬಿಂಬಿಸಿದರೆ ಮಕ್ಕಳೂ ಇದೇ ಪ್ರಭಾವಕ್ಕೆ ಒಳಗಾಗುತ್ತಾರೆ.


ಆದ್ದರಿಂದ, ಬದಲಾಗಬೇಕಾಗಿರುವುದು ಏನೂ ಅರಿಯದ ಮಕ್ಕಳಲ್ಲ. ಎಲ್ಲವನ್ನೂ ಅರಿತಿದ್ದೇವೆಂದು ಭಾವಿಸಿರುವ ನಾವು. ಜವಾಬ್ದಾರಿಯುತ ನಾಗರಿಕರು. ನೆಪಗಳನ್ನು ಹುಡುಕದೇ ಈ ಕ್ಷಣವೇ ಕನಿಷ್ಠ ಮಟ್ಟದ ನಾಗರಿಕ ಪ್ರಜ್ಞೆ ಬೆಳೆಸಿಕೊಳ್ಳೋಣ. ಇದೇನು ಬಾರಿ ಬಾರಿ ಕಷ್ಟವಲ್ಲ.

ಮನಸ್ಸು ಮಾಡಿದರೆ ಸುಲಭ ಮತ್ತು ಸರಳ.....

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ ಪರಿವರ್ತನೆಗಾಗಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

## ಕಲಿಕಾಸಕ್ತಿ ಮತ್ತು ದುಶ್ಚಟಗಳಿಂದ ದೂರ ಉಳಿಯುವಿಕೆ ಕುರಿತು ವಿಚಾರ ಸಂಕಿರಣ

**ದಾವಣಗೆರೆ;** ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಾತೃಶ್ರೀ ನಗರ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆ, ಜಿ.ಚನ್ನಪ್ಪ ಪದವಿ ಪೂರ್ವ ಕಾಲೇಜು, ಆನಗೋಡು ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 23 ರಂದು ಬೆಳಗ್ಗೆ 10.30 ಕ್ಕೆ ಆನಗೋಡು ಜಿ.ಚನ್ನಪ್ಪ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಕಲಿಕಾಸಕ್ತಿ ಮತ್ತು ದುಶ್ಚಟಗಳಿಂದ ದೂರ ಉಳಿಯುವುದು ಕುರಿತು ವಿಚಾರ ಸಂಕಿರಣ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಉದ್ಘಾಟಿಸುವರು. ಕಾಲೇಜಿನ ಪ್ರಾಂಶುಪಾಲರಾದ ಕಾವೇರಿ ಗೌಡ ಅಧ್ಯಕ್ಷತೆ ವಹಿಸುವರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಧನಂಜಯ.ಬಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು ಇತಿಹಾಸ ಉಪನ್ಯಾಸಕರಾದ ಹೆಚ್.ಪಿ.ಯಶವಂತ್ ಕುಮಾರ್, ಮಾತೃಶ್ರೀ ಸಂಸ್ಥೆ ಅಧ್ಯಕ್ಷರಾದ ಕಿರಣ್ ಎ.ಎಲ್ ಉಪನ್ಯಾಸ ನೀಡುವರು.

## ತಜ್ಞರು, ಸಿಬ್ಬಂದಿಗೆ ಆರೈಕೆ ಒಡನಾಡಿ ಪ್ರಶಂಸನಾ ಕಾರ್ಯಕ್ರಮ

**ದಾವಣಗೆರೆ:** ಚಿಗಟೇರಿ ಜಿಲ್ಲಾ ಆಸ್ಪತ್ರೆ ಹಾಗೂ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ತಾಯಿ ಮತ್ತು ಮಕ್ಕಳ ತಜ್ಞರುಗಳು ಹಾಗೂ ಶುಶ್ರೂಕೆ ಕಾರ್ಯದಲ್ಲಿ ಭಾಗಿಯಾದ ಶುಶ್ರೂಷಾ ಅಧಿಕಾರಿಗಳು, ಆಪ್ತ ಸಮಾಲೋಚಕರಿಗೆ ಆಗಸ್ಟ್ 23 ರಂದು ಬೆಳಗ್ಗೆ 10 ಗಂಟೆಗೆ ಡಿಇಐಸಿ ಸಭಾಂಗಣದಲ್ಲಿ ಅರೈಕೆ ಒಡನಾಡಿ ಪ್ರಶಂಸನಾ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T